# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

| Volume: 01, | Issue: 266 | RNI Number : KNKAN/25/A2770 | 09-10-2026 | Friday | Page 04, | Price 2/- | suddinimmuru@gmail.com | Mob:-8660146563 |
|---|---|---|---|---|---|---|---|---|
| ಸಂಪುಟ :01 | ಸಂಚಿಕೆ:266 | ರಾಯಚೂರು | 09-10-2026 | ಶುಕ್ರವಾರ | ಪುಟ 04 | ಬೆಲೆ ರೂ.2/- | | ಮೊ:8660146563 |




## ರೈತರನ್ನು ಯಾವುದೇ ಕಾರಣಕ್ಕೂ ಸಂಕಷ್ಟದಲ್ಲಿ ಇರಲು ಬಿಡುವುದಿಲ್ಲ: ಡಾ. ಜಿ. ಪರಮೇಶ್ವರ್

ರಾಯಚೂರು ಅ.08

ರೈತ ಸಮುದಾಯಕ್ಕೆ ಬಡವರಿಗೆ ಮತ್ತು ಕೂಲಿ ಕಾರ್ಮಿಕರಿಗೆ ನೆರವು ನೀಡಲು ಸರ್ಕಾರವು ಬದ್ಧವಾಗಿದೆ. ರೈತರನ್ನು ಯಾವುದೇ ಕಾರಣಕ್ಕೂ ಸಂಕಷ್ಟದಲ್ಲಿ ಇರಲು ಬಿಡುವುದಿಲ್ಲ. ಅವರಿಗೆ ಆಗಿರುವ ನಷ್ಟಕ್ಕೆ ಸೂಕ್ತ ಪರಿಹಾರ ನೀಡುವಂತೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ಹೇಳಿದರು.

ಅಕ್ಟೋಬರ್ 08ರ ಗುರುವಾರ ದಂದು ಜಿಲ್ಲೆಯ ಸಿಂಧನೂರು ತಾಲೂಕಿನ ಕಲಮಂಗಿ ಗ್ರಾಮದಲ್ಲಿ ಬರ

ಮೂರನೇಯ ಪುಟಕ್ಕೆ

### ಉಪ ಮುಖ್ಯಮಂತ್ರಿಗಳಿಂದ ರಾಯಚೂರು ಜಿಲ್ಲೆಯಲ್ಲಿ ಬೆಳೆ ಹಾನಿ ಪರಿಶೀಲನೆ

## ಸರ್ಕಾರವು ರೈತರು, ಕೂಲಿ ಕಾರ್ಮಿಕರು ,ಬಡವರ ಪರವಾಗಿದೆ: ಪರಮೇಶ್ವರ್

ರಾಯಚೂರು ಅ.08 : ಕರ್ನಾಟಕ ಸರ್ಕಾರದ ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ಅಕ್ಟೋಬರ್ 08ರ ಗುರುವಾರ ರಾಯಚೂರು ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರಗಳಿಗೆ ತೆರಳಿ ಅನಾವೃಷ್ಟಿಯಿಂದ ತೀವ್ರವಾಗಿ ಬಾಧಿಸಿರುವ ಬರ ಪರಿಸ್ಥಿತಿಯ ನೇರ ವೀಕ್ಷಣೆ ಮತ್ತು ಬೆಳೆ ಹಾನಿ ಪರಿಶೀಲನೆ ನಡೆಸಿದರು.

ಕೊಪ್ಪಳ ಜಿಲ್ಲೆಯಿಂದ ಆಗಮಿಸಿ, ಮೊದಲಿಗೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಊಮಲೂಟಿ ಗ್ರಾಮದ ಊಮಲೂಟಿ ಸೀಮಾಂತರ ಬೀರಮಲ್ಲಪ್ಪ ಅವರ ಸರ್ವೆ ನಂಬರ್ 92ರಲ್ಲಿ ಸುಮಾರು 20 ಎಕರೆಯಷ್ಟು ತೊಗರಿ ಬೆಳೆಹಾನಿಯ ಹೊಲವನ್ನು ವೀಕ್ಷಣೆ ಮಾಡಿದರು.

ನಂತರ ಕಮಲಂಗಿ ಗ್ರಾಮದ ಸರ್ವೇ ನಂಬರ್ 14ರ ನಾಗಮ್ಮ ಗಂಡ ಶರಣೆಗೌಡ ಅವರ ಹೊಲಕ್ಕೆ ಭೇಟಿ ನೀಡಿ, ತೊಗರಿ ಬೆಳೆಯನ್ನು ವೀಕ್ಷಣೆ ಮಾಡಿದರು.

ಈ ವೇಳೆ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ್ ಅವರು ರೈತರೊಂದಿಗೆ ಸಂವಾದ ನಡಿಸಿ, ಮಾತನಾಡಿ, ರಾಜ್ಯದ 240 ತಾಲೂಕುಗಳಲ್ಲಿ ಈಗಾಗಲೇ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಉಳಿದ ತಾಲೂಕುಗಳೂ ಸಹ ಬರಗಾಲದ



ಭೀತಿಯಲ್ಲಿವೆ. ಕರಾವಳಿ ಭಾಗವನ್ನು ನಾಲ್ಕರಿಂದ ಐದು ತಾಲ್ಲೂಕುಗಳನ್ನು ಹೊರತುಪಡಿಸಿ ಇಡೀ ರಾಜ್ಯವೇ ಇಂದು ಬರಗಾಲದಲ್ಲಿದೆ. ಮಳೆಯಿಲ್ಲದೆ ಮಣ್ಣು ಸಂಪೂರ್ಣವಾಗಿ ಒಣಗಿ ಸುಡುತ್ತಿದ್ದು, ರೈತರು ಬಿತ್ತಿದ ಎಲ್ಲಾ ಬೆಳೆಗಳು ನಾಶವಾಗಿವೆ. 125 ವರ್ಷಗಳ ಹಿಂದೆ ಇಂತಹ ಭೀಕರ ಬರಗಾಲ ಬಂದಿತ್ತು ಎಂದು ಹಿರಿಯರು ಸ್ಮರಿಸುತ್ತಾರೆ.

ರೈತರ ಆರ್ಥಿಕ ಸಂಕಟ: ಅನ್ನದಾತನಾಗಿರುವ ರಾಜ್ಯದ ರೈತ ಆರ್ಥಿಕ ಶಕ್ತಿಯಾಗಿದ್ದು, ಪ್ರಸ್ತುತ ಅವನು ತೀವ್ರ ಕಷ್ಟದಲ್ಲಿದ್ದಾನೆ. ಬ್ಯಾಂಕ್ ಹಾಗೂ ಇತರೆಡೆ ಸಾಲ ಮಾಡಿ ಬಿತ್ತನೆ ಮಾಡಿದ್ದ ರೈತರಿಗೆ ಈಗ ಕೈಯಲ್ಲಿ ಯಾವುದೇ ಫಸಲು ಸಿಗದೆ ಸಂಕಷ್ಟ ಎದುರಾಗಿದೆ. ರಾಜ್ಯ

ಮೂರನೇಯ ಪುಟಕ್ಕೆ

### ರಾಜ್ಯ ಕಾಂಗ್ರೆಸ್‌ನಿಂದ ಪ್ರಜಾಪ್ರಭುತ್ವ ಕರಾಳ ದಿನ ಪ್ರತಿಭಟನೆ

## ಅ.10-20ರವರೆಗೆ ಮತ ಉಳಿಸಿ ದೇಶ ಉಳಿಸಿ ಪಾದಯಾತ್ರೆ

: ಬಿ.ಕೆ.ಹರಿಪ್ರಸಾದ್

ಬೆಂಗಳೂರು: ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಹಾಗೂ ಚುನಾಯಿತ ಜನಪ್ರತಿನಿಧಿಗಳ ಮೇಲಿನ ದೆಹಲಿ ಪೊಲೀಸರ ದಬ್ಬಾಳಿಕೆ ಖಂಡಿಸಿ ಇಂದು ಬೆಂಗಳೂರಿನ ಕೆಪಿಸಿಸಿ ಕಚೇರಿ ಎದುರು 'ಪ್ರಜಾಪ್ರಭುತ್ವದ ಕರಾಳ ದಿನ' ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕೈ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು. ಪ್ರಜಾಪ್ರಭುತ್ವದ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನಗಳ ವಿರುದ್ಧ ನಮ್ಮ ಹೋರಾಟ ನಿರಂತರ. ಚುನಾವಣಾ ಆಯೋಗದ ಮುಖ್ಯಸ್ಥ ಜ್ಞಾನೇಶ್ ಕುಮಾರ್ ಅವರನ್ನು ಪದಚ್ಯುತಗೊಳಿಸುವವರೆಗೆ ಹಾಗೂ ಚುನಾವಣಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆ ಮರುಸ್ಥಾಪನೆ ಆಗುವವರೆಗೆ ಕಾಂಗ್ರೆಸ್ ಪಕ್ಷದ ಹೋರಾಟ ನಿಲ್ಲುವುದಿಲ್ಲ ಎಂದು ಬಿ.ಕೆ.ಹರಿಪ್ರಸಾದ್ ತಿಳಿಸಿದರು.

ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಕೆಪಿಸಿಸಿ ಅಧ್ಯಕ್ಷರು, ನಿನ್ನೆ ದೆಹಲಿಯಲ್ಲಿ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಅವರು ಸುಮಾರು 300 ಜನ ಲೋಕಸಭೆ ಹಾಗೂ ರಾಜ್ಯಸಭೆ ಸದಸ್ಯರ ಇಂಡಿಯಾ ಮೈತ್ರಿಕೂಟದ ಪ್ರತಿಭಟನೆ ಮಾಡುವಾಗ ದೆಹಲಿ ಪೊಲೀಸರಿಂದ ಗೂಂಡಾಗಿರಿ ನಡೆದಿದೆ. ನಮಗೆ ಬಂದಿರುವ ಅನೇಕ ಮಾಹಿತಿಗಳ ಪ್ರಕಾರ ಕೆಲವು ಗೂಂಡಾಗಳನ್ನು ಪೊಲೀಸರ ಸಮವಸ್ತ್ರದಲ್ಲಿ ಕಳುಹಿಸಿ ಪ್ರತಿಭಟನಾಕಾರರ ವಿರುದ್ಧ ಹಲ್ಲೆ ಮಾಡಲಾಗಿದೆ ಎಂದು ಟೀಕಿಸಿದರು.




ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಕೇಂದ್ರ ಸರ್ಕಾರ ಹಾಗೂ ಸಂವಿಧಾನಿಕ ಸಂಸ್ಥೆಗಳ ವಿರುದ್ಧ ಪ್ರತಿಭಟನೆ ಮಾಡುವ ಸಂಪೂರ್ಣ ಅಧಿಕಾರವಿದೆ. ರಾಹುಲ್ ಗಾಂಧಿ ಅವರು ದೇಶದ ಧ್ವನಿಯಾಗಿ ಪ್ರತಿಭಟನೆ ಮಾಡುವಾಗ ಅವರ ಮೇಲೆ ಆಗಿರುವ ದಾಳಿಯನ್ನು ತೀವ್ರವಾಗಿ ಖಂಡಿಸುತ್ತೇವೆ. ಚುನಾವಣಾ ಆಯೋಗ ನಡೆದುಕೊಳ್ಳುತ್ತಿರುವ ರೀತಿ ಸರಿಯಾಗಿಲ್ಲ ಎಂದು ದೂರಿದರು.

ನಿನ್ನೆ ವಿಜಯಪುರ ಜಿಲ್ಲೆಯಲ್ಲಿ ಜೀವಂತವಾಗಿರುವ ಮಹಿಳೆಯರನ್ನು ಮರಣ ಪಟ್ಟಿಯಲ್ಲಿ ಸೇರಿಸಿದ್ದು, ಅವರ ಮರಣ ಪ್ರಮಾಣಪತ್ರ ಕೂಡ ಸಲ್ಲಿಕೆ ಮಾಡಲಾಗಿದೆ. ಇದನ್ನು ನೋಡಿದರೆ ಚುನಾವಣಾ ಆಯೋಗದ ಅಧಿಕಾರಿಗಳು ಬಿಜೆಪಿ ಏಜೆಂಟರಂತೆ ಕೆಲಸ ಮಾಡುತ್ತಿರುವುದು ಸಾಬೀತಾಗುತ್ತದೆ. ಇನ್ನು ಮಲ್ಲೇಶ್ವರ ಕ್ಷೇತ್ರದಲ್ಲಿ 1,211 ಮತಗಳನ್ನು ನಾವು ಗುರುತಿಸಿದ್ದು, ಕ್ಷೇತ್ರದ ವಿವಿಧ ಮತಗಟ್ಟೆಗಳಲ್ಲಿ ಒಂದೇ ದಿನ 1,108 ಅರ್ಜಿಗಳು ಸಲ್ಲಿಕೆಯಾಗಿವೆ ಎಂದರು.

ಮತ ಉಳಿಸಿ ದೇಶ ಉಳಿಸಿ ಪಾದಯಾತ್ರೆ: ಮತಕಳ್ಳತನ ಆಗುತ್ತಿರುವ ಸಂದರ್ಭದಲ್ಲಿ ಕಾಂಗ್ರೆಸ್ ಹೋರಾಟದ ಭಾಗವಾಗಿ ಅ.10ರಿಂದ ಅ.20ರವರೆಗೆ ಪ್ರತಿ ಬ್ಲಾಕ್‌ನಲ್ಲಿ ಮತ ಉಳಿಸಿ ದೇಶ ಉಳಿಸಿ ಎಂಬ ಪಾದಯಾತ್ರೆ ಮಾಡುತ್ತೇವೆ. ಅಂಬೇಡ್ಕರ್ ಅಥವಾ ಗಾಂಧೀಜಿ ಅವರ ಪ್ರಿಮೆಯಿಂದ ಡಿಸಿ ಕಚೇರಿವರೆಗೆ ಪಾದಯಾತ್ರೆ ಸಾಗುವುದು. ಈ ಪಾದಯಾತ್ರೆ 5 ಕಿ.ಮೀ ಗಿಂತ ಹೆಚ್ಚು ಇರುವುದಿಲ್ಲ. ಬ್ಲಾಕ್‌ನ ಹಿರಿಯ ನಾಯಕರು ಭಾಗವಹಿಸಲಿದ್ದು, ಡಿಸಿ ಭೇಟಿ ಬಳಿಕ ರಾಷ್ಟ್ರಗೀತೆ ಹಾಡುವುದು ಹಾಗೂ ಜ್ಞಾನೇಶ್ ಕುಮಾರ್ ಪ್ರತಿಕೃತಿ ದಹನ ಮಾಡಲಾಗುವುದು ಎಂದರು.

ದಸರಾ ಸಂದರ್ಭದಲ್ಲಿ ಮತಗಳ್ಳತನದಿಂದ ಆಗುತ್ತಿರುವ ಅನಾಹುತದ ಬಗ್ಗೆ ಜನರಲ್ಲಿ ಜಾಗೃತಿ ಮಾಡಲಾಗುವುದು. ನಂತರ ಅ.25ರಿಂದ ನ.25ರವರೆಗೆ ಹಲವು ಕಾರ್ಯಕ್ರಮ ಹಮ್ಮಿಕೊಂಡಿದ್ದು, ಸಾರ್ವಜನಿಕ ಸಭೆ ಹಾಗೂ ಮಾಧ್ಯಮಗೋಷ್ಠಿ ನಡೆಸಿ ಜನರಲ್ಲಿ ಜಾಗೃತಿ ಮೂಡಿಸಲಾಗುವುದು. ರಾಜ್ಯದ ನಾಯಕರು ಆವರವರ ಜಿಲ್ಲೆಗಳ ಹೋರಾಟದಲ್ಲಿ ಭಾಗಿಯಾಗಲಿದ್ದಾರೆ. ಬ್ಲಾಕ್ ಅಧ್ಯಕ್ಷರು ಹಾಗೂ ಬಿಎಲ್‌ಎಗಳಿಗೆ ಈ ಅಕ್ರಮದಿಂದ ಆಗುವ ಅನಾಹುತ ತಡೆಗಟ್ಟಲು ಮಾರ್ಗದರ್ಶನ ನೀಡಲಾಗುವುದು. ಇನ್ನು ಫಾರಂ-7 ಹಾಗೂ ಇತರ ಮೂಲಕ ಯಾರ ಹೆಸರನ್ನು ಮತಪಟ್ಟಿಯಿಂದ ಬಿಡಲಾಗಿದೆ ಅವರನ್ನು ಸೇರಿಸಿ ಸಭೆ ಮಾಡಲಾಗುವುದು ಎಂದರು.

ಮೂಲಕ ಹೆಸರು ಕೈಬಿಟ್ಟಿರುವವರಿಗೆ ಪಂಚಾಯ್ತಿ ಮಟ್ಟದಲ್ಲಿ ಸಮೀಕ್ಷೆ ಮಾಡಿ ಪರಿಶೀಲನೆ ಮಾಡಲಾಗುವುದು. ನ.1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ಇಂಡಿಯಾ ಒಕ್ಕೂಟದಿಂದ ಬೃಹತ್ ಪ್ರತಿಭಟನೆ ನಡೆಯಲಿದ್ದು, ಈ ಹೋರಾಟ ಜ್ಞಾನೇಶ್ ಕುಮಾರ್ ರಾಜೀನಾಮೆ ಹಾಗೂ ಮೋದಿ ಹಾಗೂ

3ನೇಯ ಪುಟಕ್ಕೆ

## ಕರ್ನಾಟಕ ಧಮ್ಮ ಜನಜಾಗೃತಿ ಯಾತ್ರೆ ರಥಕ್ಕೆ ದೇವದುರ್ಗದಲ್ಲಿ ಅದ್ದೂರಿ ಸ್ವಾಗತ

ದೇವದುರ್ಗ,ಅ.08-

ಸಂವಿಧಾನ ಆಧಾರಿತ ಪ್ರಬುದ್ಧ ಭಾರತ ನಿರ್ಮಾಣ ಹಾಗೂ ಬೌದ್ಧ ಧಮ್ಮದ ಮಾನವೀಯ ಮೌಲ್ಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಅಕ್ಟೋಬರ್ 5ರಂದು ಆರಂಭಗೊಂಡಿರುವ ಕರ್ನಾಟಕ ಧಮ್ಮ ಜನಜಾಗೃತಿ ಯಾತ್ರೆಯ ರಥವು ದೇವದುರ್ಗ ಪಟ್ಟಣಕ್ಕೆ ಆಗಮಿಸಿತು.

ಈ ಸಂದರ್ಭದಲ್ಲಿ ಬೌದ್ಧ ಉಪಾಸಕರು, ಅಂಬೇಡ್ಕರ್‌ವಾದಿ ಚಿಂತಕರು ಹಾಗೂ ಪ್ರಗತಿಪರರು ರಥವನ್ನು ಆತ್ಮೀಯವಾಗಿ ಸ್ವಾಗತಿಸಿದರು. ಯಾತ್ರೆಯ ಉದ್ದೇಶ ಹಾಗೂ ಧಮ್ಮದ ಮಾನವೀಯ ಮೌಲ್ಯಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳಿಗೆ ಬೆಂಬಲ ವ್ಯಕ್ತಪಡಿಸಿದರು.



ಪಟ್ಟಣದ ಹಜರತ್ ಜಹಿರುದ್ದೀನ ಪಾಷಾ ವೃತ್ತದಿಂದ ಆಗಮಿಸಿದ ರಥವನ್ನು ವಿವಿಧ ಸಂಘಟನೆಗಳ ಮುಖಂಡರು ಹಾಗೂ ಕಾರ್ಯಕರ್ತರು ಬರಮಾಡಿಕೊಂಡರು. ಬಳಿಕ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಂತಾರಾಷ್ಟ್ರೀಯ ಬೌದ್ಧ ಯುವ ಸಂಘಟನೆ ಇಂಡಿಯಾ, ಗ್ಲೋಬಲ್ ಡಾ. ಅಂಬೇಡ್ಕರ್ ಬೌದ್ಧ ಮಿಷನ್, ಯು.ಎಸ್.ಎ.ಯ ಕಾರ್ಯದರ್ಶಿ ಹಾಗೂ ರಾಷ್ಟ್ರೀಯ ಅಧ್ಯಕ್ಷ ಝೆನ್ ಮಾಂಕ್ ಡಾ.ಶಾಕು ಬೋಧಿ ಧಮ್ಮ ಅವರು, ಭಾರತವು ತನ್ನ ಸಂವಿಧಾನವನ್ನು ಅಂಗೀಕರಿಸಿ 76 ವರ್ಷಗಳನ್ನು ಪೂರ್ಣಗೊಳಿಸಿದ್ದು, ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಮಾನತೆ, ಸ್ವಾತಂತ್ರ್ಯ, ನ್ಯಾಯ ಮತ್ತು ಬಂಧುತ್ವದಂತಹ ಮಾನವೀಯ ಮೌಲ್ಯಗಳ ಆಧಾರದ ಮೇಲೆ ಪ್ರತಿಯೊಬ್ಬ ಭಾರತೀಯನಿಗೂ ಸಮಾನ ಹಕ್ಕುಗಳನ್ನು ಕಲ್ಪಿಸಿದ್ದಾರೆ ಎಂದು ಹೇಳಿದರು.

ತಥಾಗತ ಭಗವಾನ್ ಬುದ್ಧರ ಕಾಲದಿಂದ ಸಾಮ್ರಾಟ್ ಅಶೋಕ, ಕಾನಿಷ್ಕ ಸೇರಿದಂತೆ ಬೌದ್ಧ ರಾಜರು ಧಮ್ಮದ ಮಾನವೀಯ ತತ್ವಗಳ ಆಧಾರದ ಮೇಲೆ ಆಡಳಿತ ನಡೆಸಿದ್ದು, ಎಲ್ಲಾ ಪ್ರಜೆಗಳನ್ನು ಸಮಾನತೆ, ನ್ಯಾಯ ಮತ್ತು ಕರುಣೆಯಿಂದ ಕಾಣುತ್ತಿದ್ದರು. ಇದೇ ಮಾನವೀಯ ಮೌಲ್ಯಗಳನ್ನು ಇಂದಿನ ಸಮಾಜ ಮತ್ತು ಆಡಳಿತ ವ್ಯವಸ್ಥೆಯಲ್ಲಿಯೂ ಪುನಃ ಸ್ಥಾಪಿಸುವ ಅಗತ್ಯವಿದೆ ಎಂದು ಅವರು ತಿಳಿಸಿದರು.

1956ರ ಅಕ್ಟೋಬರ್ 14ರಂದು ನಾಗಪುರದ ದೀಕ್ಷಾ ಭೂಮಿಯಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಬೌದ್ಧ ಧಮ್ಮವನ್ನು ಪುನರುಜ್ಜೀವನಗೊಳಿಸುವ ಮೂಲಕ ಪ್ರಬುದ್ಧ ಭಾರತದ ಮಹಾನ್ ಸಂಕಲ್ಪವನ್ನು ಜಗತ್ತಿನ ಮುಂದೆ ಇಟ್ಟರು. ಆ ಸಂಕಲ್ಪವನ್ನು ಸಾಕಾರಗೊಳಿಸುವ ಉದ್ದೇಶದಿಂದ ಕರ್ನಾಟಕದಾದ್ಯಂತ

3ನೇಯ ಪುಟಕ್ಕೆ

## ಸಿಂದೊಳ್ಳು ಅಲೆಮಾರಿ ಜನಾಂಗಕ್ಕೆ ನಿವೇಶನಕ್ಕೆ ಆಗ್ರಹ




ರಾಯಚೂರು: ಲಿಂಗಸಗೂರು ತಾಲೂಕಿನ ಕರಡಕಲ್ ಗ್ರಾಮದ ಅಲೆಮಾರಿ ಸಿಂದೊಳ್ಳು ಜನಾಂಗದ 28 ನಿವೇಶನ ರಹಿತ ಕುಟುಂಬಗಳಿಗೆ ಕೂಡಲೇ ನಿವೇಶನ ಮಂಜೂರು ಮಾಡಿ ಹಕ್ಕುಪತ್ರ ನೀಡಬೇಕು ಎಂದು ಸಿಂದೊಳ್ಳು ಸಮಾಜದ ರಾಜ್ಯಾಧ್ಯಕ್ಷ ಶ್ರೀನಿವಾಸ್ ಎಸ್.ಆರ್. ಆಗ್ರಹಿಸಿದರು.

ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿ ಮಾತನಾಡಿದ ಅವರು, ನಿವೇಶನಕ್ಕಾಗಿ ಕುಟುಂಬಗಳು ಅರ್ಜಿ ಸಲ್ಲಿಸಿದ್ದು, ಸರ್ವೆ ನಂ. 286/★/★ರಲ್ಲಿ 1 ಎಕರೆ ಜಮೀನು ಗುರುತಿಸಿ ತಹಶೀಲ್ದಾರರು ವರದಿ ಸಲ್ಲಿಸಿದ್ದಾರೆ ಎಂದರು.

ಸಹಾಯಕ ಆಯುಕ್ತರು ಜಮೀನಿನ ವಿವರ ಹಾಗೂ ಅರ್ಹ 28 ಫಲಾನುಭವಿಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳಿಗೆ ಕಳುಹಿಸಿದ್ದಾರೆ. ಆದ್ದರಿಂದ ಸಂಬಂಧಿಸಿದ ಅಧಿಕಾರಿಗಳು ತ್ವರಿತವಾಗಿ ಕ್ರಮ ಕೈಗೊಂಡು 28 ಕುಟುಂಬಗಳಿಗೆ ನಿವೇಶನ ಹಂಚಿಕೆ ಮಾಡಿ ಹಕ್ಕುಪತ್ರ ನೀಡಬೇಕು ಎಂದು ಒತ್ತಾಯಿಸಿದರು.

3ನೇಯ ಪುಟಕ್ಕೆ

### ಸೇವಾ ಮನೋಭಾವ ಬೆಳೆಸುವಲ್ಲಿ ಎನ್‌ಎಸ್‌ಎಸ್ ಶಿಬಿರಗಳ ಪಾತ್ರ ಮಹತ್ವದ್ದು

## ಗಬ್ಬೂರಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ

ಗಬ್ಬೂರು: ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಹಾರ ಸಿದ್ದಪ್ಪಗೌಡ ಕರೆಡ್ಡಿ ಶಿಕ್ಷಣ ಮಹಾವಿದ್ಯಾಲಯ, ರಾಯಚೂರು ಮತ್ತು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಘಟಕದ ವತಿಯಿಂದ ಗಬ್ಬೂರು ಗ್ರಾಮದ ಎಸ್‌ಎಲ್‌ಡಿ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭವು ಅ.8 ರಂದು ನಡೆಯಿತು.



ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಗಬ್ಬೂರಿನ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಶ್ರೀ ಸದಾಶಿವಯ್ಯ ಸ್ವಾಮಿಮಠದ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ಶಿಸ್ತು, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಅತಿಥಿಗಳಾಗಿ ಭಾಗವಹಿಸಿದ್ದ ಎಸ್‌ಎಲ್‌ಡಿ ಪಬ್ಲಿಕ್ ಶಾಲೆ, ಗಬ್ಬೂರಿನ ಅಧ್ಯಕ್ಷರಾದ ಮಲ್ಲಿಕಾ

3ನೇಯ ಪುಟಕ್ಕೆ

## ನಿರುದ್ಯೋಗ ನಿರ್ಮೂಲನೆಯಲ್ಲಿ ಯುವಜನರ ಪಾತ್ರ ಮಹತ್ವದ್ದು: ಶ್ರೀ ಶ್ರೀ ಶಂಭು ಸೋಮನಾಥ ಶಿವಾಚಾರ್ಯ ಮಹಾಸ್ವಾಮೀಜಿಗಳು

ಗಬ್ಬೂರು: ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಐದನೇ ಉಪನ್ಯಾಸ ಕಾರ್ಯಕ್ರಮವು ''ನಿರುದ್ಯೋಗ ನಿರ್ಮೂಲನೆಯಲ್ಲಿ ಯುವಜನರ ಪಾತ್ರ'' ಎಂಬ ವಿಷಯದ ಕುರಿತು ಗಬ್ಬೂರು ಗ್ರಾಮದಲ್ಲಿ



ನಡೆಯಿತು.

ಆದಿ ಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು, ಜಿಲ್ಲಾ ವೀರಶೈವ ಲಿಂಗಾಯತ ಸಮಾಜ, ರಾಯಚೂರು ಹಾಗೂ ಹೆಚ್.ಸಿ.ಎಂ.ಎಸ್.ಕೆ ಶಿಕ್ಷಣ ಮಹಾವಿದ್ಯಾಲಯ, ರಾಯಚೂರು ರಾಷ್ಟ್ರೀಯ ಸೇವಾ ಯೋಜನೆ ಘಟಕದ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಹಾಗೂ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ಶ್ರೀ ಷ//ಬ// ಶಂಭು ಸೋಮನಾಥ ಶಿವಾಚಾರ್ಯ ಮಹಾಸ್ವಾಮೀಜಿಗಳು, ಶ್ರೀ ಪಂಚಾಕ್ಷರಿ ಮಹಾಸಂಸ್ಥಾನ ತೀರ್ಥ ಬೃಹನ್ಮಠ, ಸುಲ್ತಾನಪುರ, ಅವರು ಆಶೀರ್ವಚನ ನೀಡಿ, ಯುವಜನರು ಸ್ವಾವಲಂಬಿಗಳಾಗಿ ತಮ್ಮ ಕೌಶಲ್ಯಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು. ಉದ್ಯೋಗವನ್ನು ಹುಡುಕುವುದರ ಜೊತೆಗೆ ಉದ್ಯೋಗ ಸೃಷ್ಟಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಯುವಶಕ್ತಿಯನ್ನು ಸದುಪಯೋಗಪಡಿಸಿಕೊಂಡಾಗ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀ ವಿಜಯಕುಮಾರ್, ಸದಸ್ಯರು, ಜಿಲ್ಲಾ ವೀರಶೈವ ಲಿಂಗಾಯತ ಸಮಾಜ, ಮಾತನಾಡಿ, ಯುವಜನರು ಶಿಕ್ಷಣದ ಜೊತೆಗೆ ಕೌಶಲ್ಯಾಧಾರಿತ ತರಬೇತಿ ಪಡೆದು ಸ್ವಯಂ ಉದ್ಯೋಗ ಹಾಗೂ ಉದ್ಯಮಶೀಲತೆಯತ್ತ ಗಮನಹರಿಸಬೇಕು ಎಂದು ತಿಳಿಸಿದರು.

ಶ್ರೀ ಚನ್ನಪ್ಪ ಬೂದಿನಾಳ, ಅಧ್ಯಕ್ಷರು, ವಿದ್ಯಾಜ್ಯೋತಿ ಸಂಸ್ಥೆ, ಗಬ್ಬೂರು,

3ನೇಯ ಪುಟಕ್ಕೆ

# ಸಾಹಿತಿಗಳು ಆತ್ಮವಿಮರ್ಶೆ ಮಾಡಿಕೊಳ್ಳುತ್ತಾ ಸಮಾಜವನ್ನೂ ವಿಮರ್ಶಿಸಬೇಕು: ಮುಕುಂದರಾಜ್

ಕಲಬುರಗಿ,ಅ.08-

ಸಾಹಿತಿಗಳು ಮತ್ತು ವಿಮರ್ಶಕರು ಕನ್ನಡ ಸಾಹಿತ್ಯವನ್ನು ಗಂಭೀರವಾಗಿ ಪರಿಗಣಿಸುವುದರ ಜೊತೆಗೆ ಆತ್ಮವಿಮರ್ಶೆ ಮಾಡಿಕೊಳ್ಳುತ್ತಾ ಸಮಾಜದ ಆಗುಹೋಗುಗಳನ್ನೂ ವಿಮರ್ಶಿಸಬೇಕು ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್. ಮುಕುಂದರಾಜ್ ಹೇಳಿದರು.



ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕನ್ನಡ ವಿಭಾಗ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿರುವ ಕನ್ನಡ ವಿಮರ್ಶೆಯ ತಾತ್ವೀಕರಣ ವಿಷಯದ ಮೂರು ದಿನಗಳ ಕಮ್ಮಟವನ್ನು ಬುಧವಾರ ಸಿಯುಕೆಯ ಕನ್ನಡ ವಿಭಾಗದ ಸಭಾಂಗಣದಲ್ಲಿ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಸಂದರ್ಭದಲ್ಲಿ ಕನ್ನಡ ಸಾಹಿತ್ಯದ ಜೊತೆಗೆ ಸಿನಿಮಾ, ರಂಗಭೂಮಿ, ನಾಟಕ, ಪತ್ರಿಕೋದ್ಯಮ ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿನ ಬೆಳವಣಿಗೆಗಳನ್ನೂ ವಿಮರ್ಶೆಯ ವ್ಯಾಪ್ತಿಗೆ ತರಬೇಕಾಗಿದೆ. ಅನೇಕ ಯುವ ಸಾಹಿತಿಗಳು ತಮ್ಮ ಬರವಣಿಗೆಯ ಮೂಲಕ ಸಮಾಜಮುಖಿ ಕಾರ್ಯ ಮಾಡುತ್ತಿದ್ದಾರೆ. ಅಂತಹ ಬರಹಗಾರರನ್ನು ಗುರುತಿಸಿ ಪ್ರೋತ್ಸಾಹಿಸುವ ಅಗತ್ಯವಿದೆ ಎಂದರು.

ಸಂಕಷ್ಟದ ಪರಿಸ್ಥಿತಿಗಳಲ್ಲಿಯೂ ವಿಮರ್ಶಕರು ಹಾಗೂ ಸಾಹಿತ್ಯಕಾರರು ಸತ್ಯವನ್ನು ಹೇಳುವ ಧೈರ್ಯ ಹೊಂದಿರಬೇಕು. ಮೌನಕ್ಕೆ ಶರಣಾಗುವುದು ಆತ್ಮಾಹುತಿಗೆ ಸಮಾನ. ಸಮಾಜದ ಆಗುಹೋಗುಗಳನ್ನು ಸೂಕ್ಷ್ಮವಾಗಿ ಗಮನಿಸಿ, ಅಗತ್ಯವಿದ್ದಲ್ಲಿ ತಮ್ಮ ಬರವಣಿಗೆಯ ಮೂಲಕ ಪ್ರಶ್ನಿಸುವ ಮತ್ತು ಪ್ರತಿರೋಧಿಸುವ ಮನೋಭಾವವನ್ನು ಸಾಹಿತಿಗಳು ಬೆಳೆಸಿಕೊಳ್ಳಬೇಕು ಎಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ, ಯಾವುದೇ ಭಾಷೆಯನ್ನು ಪ್ರೀತಿಸುವುದರ ಜೊತೆಗೆ ಗೌರವಿಸಬೇಕು. ರಾಷ್ಟ್ರೀಯ ಶಿಕ್ಷಣ ನೀತಿ 2020ರ ಆಶಯದಂತೆ ವಿದ್ಯಾರ್ಥಿಗಳಿಗೆ ತಮ್ಮ ಪ್ರಾದೇಶಿಕ ಭಾಷೆಯಲ್ಲಿಯೇ ಶಿಕ್ಷಣ ನೀಡುವುದರಿಂದ ವಿಷಯಗಳನ್ನು, ವಿಶೇಷವಾಗಿ ಮಾಹಿತಿ ತಂತ್ರಜ್ಞಾನಕ್ಕೆ ಸಂಬಂಧಿಸಿದ ಜ್ಞಾನವನ್ನು ಸುಲಭವಾಗಿ ಗ್ರಹಿಸಲು ಸಾಧ್ಯವಾಗುತ್ತದೆ ಎಂದರು.

ಜಪಾನ್, ಜರ್ಮನಿ ಸೇರಿದಂತೆ ಹಲವು ದೇಶಗಳಲ್ಲಿ ಸ್ಥಳೀಯ ಭಾಷೆಯಲ್ಲಿಯೇ ಶಿಕ್ಷಣ ನೀಡಲಾಗುತ್ತಿದೆ. ಅದೇ ರೀತಿ ಕನ್ನಡದ ಮಹಾನ್ ಕವಿಗಳಾದ ಪಂಪ, ರನ್ನ, ಪೊನ್ನ ಮೊದಲಾದವರ ಸಾಹಿತ್ಯ ಮತ್ತು ಕೃತಿಗಳ ಸತ್ವವನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕಾಗಿದೆ. ಕನ್ನಡವು ಶಾಸ್ತ್ರೀಯ ಹಾಗೂ ಪ್ರಾಚೀನ ಭಾಷೆಯಾಗಿದ್ದು, ಕನ್ನಡ ಸಾಹಿತ್ಯ ಮತ್ತು ಪರಂಪರೆಯನ್ನು ಇತರ ಭಾಷೆಗಳಿಗೆ ಅನುವಾದಿಸುವುದರ ಜೊತೆಗೆ ಇಂದಿನ ವಿದ್ಯಾರ್ಥಿಗಳು ಕನ್ನಡ ಸಾಹಿತ್ಯವನ್ನು ಮತ್ತಷ್ಟು ಆಳವಾಗಿ ಅಧ್ಯಯನ ಮಾಡಬೇಕು ಎಂದು ಹೇಳಿದರು.

ಕಮ್ಮಟದ ಕುರಿತು ಮೈಸೂರಿನ ಭಾರತೀಯ ಭಾಷಾ ಸಂಸ್ಥಾನದ ನಿರ್ದೇಶಕ ಪ್ರೊ. ಬಸವರಾಜ ಎಂ. ಕೋಡಗುಂಟಿ ಹಾಗೂ ಹೊಸಕೋಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ. ರಾಮಲಿಂಗಪ್ಪ ಟಿ. ಬೇಗೂರು ಮಾತನಾಡಿದರು. ಈ ಸಂದರ್ಭದಲ್ಲಿ ಕನ್ನಡ ವಿಮರ್ಶೆ ಮತ್ತು ತಾತ್ವೀಕರಣ ಕುರಿತು ಸಿಯುಕೆಯ ಮಾನವಿಕ ಮತ್ತು ಭಾಷಾ ನಿಕಾಯದ ಡೀನ್ ಪ್ರೊ. ಗಣೇಶ್ ಪವಾರ್ ವಿಚಾರ ಮಂಡಿಸಿದರು. ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯ ಸಂಚಾಲಕ ಸಿದ್ದರಾಮ ಹೊನ್ಕಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಯುಕೆ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ. ಶಿವಗಂಗಾ ರಮ್ಮಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಕಮ್ಮಟದ ಮೊದಲ ದಿನ ವಿ.ಬಿ. ತಾರಕೇಶ್ವರ ಅವರು ಅನುವಾದ ಕೃತಿಗಳಲ್ಲಿನ ಕನ್ನಡ ವಿಮರ್ಶೆಯ ಪರಿಕಲ್ಪನೀಕರಣ ವಿಷಯದ ಕುರಿತು ಉಪನ್ಯಾಸ ನೀಡಿದರು. ಡಾ. ರಾಮಲಿಂಗಪ್ಪ ಟಿ. ಬೇಗೂರು ಹಾಗೂ ಶ್ರೀಮತಿ ಪದ್ಮಪ್ರಸಾದ ಅವರು ಕನ್ನಡ ಸಾಹಿತ್ಯ ಚರಿತ್ರೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕನ್ನಡ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ವಿಕ್ರಮ ವಿಸಾಜಿ, ಡಾ. ಅಪ್ಪಗೆರೆ ಸೋಮಶೇಖರ, ಡಾ. ಟಿ.ಡಿ. ರಾಜಣ್ಣ, ಡಾ. ರೋಹಿಣಾಕ್ಷ ಶಿರ್ಲಾಲು ಸೇರಿದಂತೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ಸದಸ್ಯರು, ಸಿಯುಕೆಯ ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು, ಸಂಪನ್ಮೂಲ ವ್ಯಕ್ತಿಗಳು ಹಾಗೂ ರಾಜ್ಯದ ವಿವಿಧ ಭಾಗಗಳ ಪ್ರತಿನಿಧಿಗಳು ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ಭಾಗವಹಿಸಿದ್ದರು.

ಅ. 7ರಿಂದ ಆರಂಭವಾದ ಮೂರು ದಿನಗಳ ಕಮ್ಮಟದಲ್ಲಿ ವಿವಿಧ ಗೋಷ್ಠಿಗಳು, ಉಪನ್ಯಾಸಗಳು ಹಾಗೂ ಸಂವಾದಗಳು ನಡೆಯಲಿವೆ.

# ಯುವಶಕ್ತಿಯನ್ನು ಸಮಾಜದ ಅಭಿವೃದ್ಧಿಗೆ ಬಳಸಿದಾಗ ದೇಶದ ಪ್ರಗತಿ ಸಾಧ್ಯ : ಪ್ರೊ.ದಯಾನಂದ ಹೊಡಲ್



ಕಲಬುರಗಿ,ಅ.08-

ಯುವಕರಲ್ಲಿ ಜ್ಞಾನ, ಶಕ್ತಿ ಮತ್ತು ಸೃಜನಶೀಲತೆ ಇದೆ. ಈ ಶಕ್ತಿಯನ್ನು ಸಮಾಜದ ಅಭಿವೃದ್ಧಿಗಾಗಿ ಬಳಸಿದಾಗ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಶರಣಬಸವೇಶ್ವರ ವಾಣಿಜ್ಯ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ದಯಾನಂದ ಹೊಡಲ್ ಅಭಿಪ್ರಾಯ ಪಟ್ಟರು.

ನಗರದ ಗೋದುತಾಯಿ ದೊಡ್ಡಪ್ಪ ಅಪ್ಪ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಪದವಿ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ಎನ್‌ಎಸ್‌ಎಸ್ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದ ಅವರು, ಮಹಾತ್ಮ ಗಾಂಧೀಜಿಯವರ ಕನಸಿನಂತೆ, ಅವರ ಜನ್ಮ ಶತಮಾನೋತ್ಸವದ ವರ್ಷವಾದ 1969ರ ಸೆಪ್ಟೆಂಬರ್ 24ರಂದು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಸ್ಥಾಪನೆಯಾಯಿತು. ನಾನಲ್ಲ, ನೀನು ಎಂಬುದು ಎನ್‌ಎಸ್‌ಎಸ್‌ನ ಧ್ಯೇಯವಾಕ್ಯವಾಗಿದೆ. ಸ್ವಾರ್ಥಕ್ಕಿಂತ ಸಮಾಜದ ಹಿತವನ್ನು ಮುಂದಿಟ್ಟುಕೊಂಡು, ಸಮಾಜದ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವುಗಳ ಪರಿಹಾರಕ್ಕೆ ಕೈಜೋಡಿಸುವ ಮನೋಭಾವವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವುದು ಎನ್‌ಎಸ್‌ಎಸ್‌ನ ಪ್ರಮುಖ ಉದ್ದೇಶವಾಗಿದೆ. ಶಿಸ್ತು, ನಾಯಕತ್ವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವುದು ಇದರ ಮುಖ್ಯ ಆಶಯವಾಗಿದೆ ಎಂದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಶರಣಬಸವೇಶ್ವರ ದೇವಸ್ಥಾನ ಆವರಣದ ಶಾಲಾ-ಕಾಲೇಜುಗಳ ನಿರ್ದೇಶಕಿ ಡಾ. ನೀಲಾಂಬಿಕಾ ಶೇರಿಕಾರ ಮಾತನಾಡಿ, ಎನ್‌ಎಸ್‌ಎಸ್ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ದೊಡ್ಡ ವೇದಿಕೆಯಾಗಿದೆ. ಇಂದಿನ ಯುವ ಜನತೆ ದೇಶದ ದೊಡ್ಡ ಶಕ್ತಿಯಾಗಿದೆ. ಯುವಕರಲ್ಲಿ ಜ್ಞಾನ, ಕೌಶಲ್ಯ, ಶಿಸ್ತು ಮತ್ತು ಸೇವಾ ಮನೋಭಾವ ಬೆಳೆದರೆ ದೇಶದ ಅಭಿವೃದ್ಧಿ ಇನ್ನಷ್ಟು ವೇಗವಾಗಿ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಧ್ಯಾಪಕಿ ಡಾ. ಪುಟ್ಟಮಣಿ ದೇವಿದಾಸ ಮಾತನಾಡಿದರು. ವೇದಿಕೆಯಲ್ಲಿ ಪ್ರಾಚಾರ್ಯೆ ಡಾ. ಸೀಮಾ ಪಾಟೀಲ, ಐಕ್ಯೂಎಸಿ ಸಂಯೋಜಕಿ ಡಾ. ಪ್ರತಿಭಾ ಪಾಟೀಲ ಇದ್ದರು. ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ. ರಾಜಲಕ್ಷ್ಮೀ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕಲ್ಪನಾ ಡಿ.ಎಂ. ಅತಿಥಿ ಪರಿಚಯ ಮಾಡಿದರು. ಪ್ರಸಾದ ಅಷ್ಟಗೀಕರ ನಿರೂಪಿಸಿ, ವಂದಿಸಿದರು. ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಹಾಲಹಳ್ಳಿ (ಕೆ) ಗ್ರಾಮದಲ್ಲಿ ಬಸ್ ನಿಲ್ಲಿಸಲು ಆಗ್ರಹಿಸಿ ವಿದ್ಯಾರ್ಥಿಗಳಿಂದ ರಸ್ತೆ ತಡೆದು ಪ್ರತಿಭಟನೆ



ಬೀದರ್,ಅ.08-

ಬಸ್ ನಿಲುಗಡೆಗೆ ಆಗ್ರಹಿಸಿ ಭಾಲ್ಕಿ ತಾಲೂಕಿನ ಹಾಲಹಳ್ಳಿ (ಕೆ) ಗ್ರಾಮದಲ್ಲಿ ಬೀದರ್ ಹುಮನಾಬಾದ್-ಕಲಬುರಗಿ ಸಂಪರ್ಕಿಸುವ ಪ್ರಮುಖ ರಸ್ತೆಯನ್ನು ತಡೆದು ವಿದ್ಯಾರ್ಥಿಗಳು ಮಂಗಳವಾರ ಪ್ರತಿಭಟನೆ ನಡೆಸಿದರು.

ನೂರಾರು ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಂಡ ಜನರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಪ್ರತಿಭಟನೆಯ ಪರಿಣಾಮ ಸುಮಾರು ಒಂದು ಗಂಟೆಗೂ ಅಧಿಕ ಕಾಲ ಬೀದರ್ ಹುಮನಾಬಾದ್-ಕಲಬುರಗಿ ರಸ್ತೆ ಸಂಪೂರ್ಣ ಬಂದ್ ಆಗಿ, ಪ್ರಯಾಣಿಕರು ಪರದಾಡುವಂತಾಯಿತು.

ಗ್ರಾಮದಲ್ಲಿ ಬಸ್‌ಗಳ ಕೊರತೆ ಇದ್ದು, ಬೀದರ್ ಕಡೆಗೆ ತೆರಳುವ ಬಸ್‌ಗಳು ಸಂಪೂರ್ಣವಾಗಿ ಪ್ರಯಾಣಿಕರಿಂದ ಭರ್ತಿಯಾಗಿ ಬರುತ್ತಿವೆ. ಹೀಗಾಗಿ ಹಾಲಹಳ್ಳಿ (ಕೆ) ಗ್ರಾಮದಲ್ಲಿ ಬಸ್‌ಗಳನ್ನು ನಿಲ್ಲಿಸುತ್ತಿಲ್ಲ. ಇದರಿಂದ ವಿದ್ಯಾರ್ಥಿಗಳು ಶಾಲಾ-ಕಾಲೇಜುಗಳಿಗೆ ತೆರಳಲು ತೀವ್ರ ತೊಂದರೆ ಎದುರಿಸುತ್ತಿದ್ದಾರೆ ಎಂದು ಪ್ರತಿಭಟನಾನಿರತ ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

ಆದಷ್ಟು ಬೇಗ ಬಸ್ ಸಮಸ್ಯೆಯನ್ನು ಬಗೆಹರಿಸಿ, ಹಾಲಹಳ್ಳಿ (ಕೆ) ಗ್ರಾಮದಲ್ಲಿ ಬಸ್ ನಿಲುಗಡೆಗೆ ವ್ಯವಸ್ಥೆ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಪ್ರತಿಭಟನಾ ಸ್ಥಳಕ್ಕೆ ಧನ್ನೂರ್ ಪೊಲೀಸ್ ಠಾಣೆಯ ಪಿಎಸ್‌ಐ ಹಾಗೂ ಇತರ ಅಧಿಕಾರಿಗಳು ಭೇಟಿ ನೀಡಿ, ಬಸ್ ಸಮಸ್ಯೆಯನ್ನು ಆದಷ್ಟು ಬೇಗ ಪರಿಹರಿಸುವುದಾಗಿ ಭರವಸೆ ನೀಡಿದರು. ಬಳಿಕ ವಿದ್ಯಾರ್ಥಿಗಳು ಪ್ರತಿಭಟನೆ ಹಿಂಪಡೆದು, ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

# ಅಲ್ಪಸಂಖ್ಯಾತರು, ಸಾಮಾನ್ಯ ಜನರ ಸಮಸ್ಯೆ ಪರಿಹಾರಕ್ಕೆ ಸರಕಾರದ ಮೇಲೆ ಒತ್ತಡ: ಶಾಸಕ ಎನ್.ಎ.ಹಾರಿಸ್

ಕಲಬುರಗಿ,ಅ.08-

ಅಲ್ಪಸಂಖ್ಯಾತ ಶಾಸಕರು ಹಾಗೂ ಸಂಸದರು ಒಗ್ಗೂಡಿ ಒಕ್ಕೂಟ ರಚಿಸಿದ್ದು, ಅಲ್ಪಸಂಖ್ಯಾತರು ಸೇರಿದಂತೆ ಸಾಮಾನ್ಯ ಜನರ ವಿವಿಧ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರದ ಮೇಲೆ ಒತ್ತಡ ತರಲಾಗುವುದು ಎಂದು ಅಲ್ಪಸಂಖ್ಯಾತ ಶಾಸಕರ ಒಕ್ಕೂಟದ ಅಧ್ಯಕ್ಷ ಹಾಗೂ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ಶಾಸಕ ಎನ್.ಎ.ಹಾರಿಸ್ ನಲಪಾಡ್ ಹೇಳಿದರು. ನಗರದ ಖಾಸಗಿ ಹೋಟೆಲ್ ನಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಧವಾ ವೇತನ, ಅಂಗವಿಕಲರ ವೇತನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ಸರ್ಕಾರದ ಗಮನ ಸೆಳೆಯಲಾಗುವುದು ಎಂದರು.



ಅಲ್ಪಸಂಖ್ಯಾತರ ವಿವಿಧ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ಸಂಘಟನೆಯ ಮೂಲಕ ಸರ್ಕಾರದ ಗಮನಕ್ಕೆ ತಂದು, ಅವುಗಳ ಪರಿಹಾರಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಸಾಮಾನ್ಯ ಜನರಿಗೆ ಅನುಕೂಲವಾಗುವ ಉದ್ದೇಶದಿಂದಲೂ ಸಂಘಟನೆ ಕೆಲಸ ಮಾಡಲಿದೆ ಎಂದು ತಿಳಿಸಿದರು.

ಅಂಗವಿಕಲರ ವೇತನ ಸಮರ್ಪಕವಾಗಿ ದೊರೆಯುತ್ತಿಲ್ಲ ಎಂಬ ದೂರುಗಳು ಬಂದಿವೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಯೋಜನೆಗಳಿಗೆ ಫಲಾನುಭವಿಗಳು ಅರ್ಜಿ ಸಲ್ಲಿಸಿದ ಬಳಿಕವೂ ಕೆಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ವ್ಯವಸ್ಥೆಯಲ್ಲಿನ ಲೋಪಗಳನ್ನು ಪರಿಶೀಲಿಸಲು ಸಮಿತಿ ರಚಿಸಲಾಗಿದ್ದು, ಅಗತ್ಯವಿದ್ದಲ್ಲಿ ತನಿಖೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಲಾಗುವುದು ಎಂದು ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಜನರಿಗೆ ಅನುಕೂಲವಾಗುತ್ತಿದೆ. ಗ್ಯಾರಂಟಿ ಯೋಜನೆಗಳ ಮೂಲಕ ಸುಮಾರು 55 ಸಾವಿರ ಕೋಟಿ ರೂ. ಮೊತ್ತದ ವಿವಿಧ ಯೋಜನೆಗಳ ಪ್ರಯೋಜನ ರಾಜ್ಯದ ಜನರಿಗೆ ತಲುಪುತ್ತಿದೆ. ರಾಜ್ಯದ ಅಭಿವೃದ್ಧಿಯಲ್ಲಿ ಕೆಲವು ಕ್ಷೇತ್ರಗಳಲ್ಲಿ ಹಿನ್ನಡೆಯಾಗಿದೆ ಎಂಬ ಟೀಕೆಗಳಿದ್ದರೂ, ವಿವಿಧೆಡೆ ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ ಎಂದು ಹೇಳಿದರು.

ಹೊಸ ಮುಖ್ಯಮಂತ್ರಿ ಅಧಿಕಾರಕ್ಕೆ ಬಂದ ಬಳಿಕ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿದೆ. ಮುಂದಿನ ದಿನಗಳಲ್ಲಿಯೂ ಜನಪರ ಯೋಜನೆಗಳನ್ನು ಮುಂದುವರಿಸಲಾಗುವುದು ಎಂದರು.

ಹಾಲಿನ ದರ ಏರಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ರೈತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಹಾಗೂ ಅವರ ಒತ್ತಡದ ಹಿನ್ನೆಲೆಯಲ್ಲಿ ಹಾಲಿನ ದರ ಹೆಚ್ಚಿಸಲಾಗಿದೆ. ಕೇಂದ್ರ ಸರ್ಕಾರದ ಮಟ್ಟದಲ್ಲಿ ಹಲವು ಬೆಲೆ ಏರಿಕೆಗಳು ನಡೆಯುತ್ತಿವೆ. ರಾಜ್ಯ ಸರ್ಕಾರ ಬೆಲೆ ಏರಿಕೆಗೆ ಮುಂದಾಗಿಲ್ಲ ಎಂದು ಹೇಳಿದರು.

ಬರಪೀಡಿತ ಪ್ರದೇಶಗಳಿಗೆ ಅಗತ್ಯವಿರುವ ಅನುದಾನವನ್ನು ಕೇಂದ್ರ ಸರ್ಕಾರ ಸಮರ್ಪಕವಾಗಿ ನೀಡುತ್ತಿಲ್ಲ. ಈ ಕುರಿತು ರಾಜ್ಯ ಸರ್ಕಾರ ತನ್ನ ಹಕ್ಕಿಗಾಗಿ ಹೋರಾಟ ನಡೆಸುತ್ತಿದೆ ಎಂದು ತಿಳಿಸಿದರು.

ರಾಜ್ಯದಾದ್ಯಂತ ಪ್ರವಾಸ ಕೈಗೊಂಡಿದ್ದು, ಬೀದರ್ ಜಿಲ್ಲೆಯ ಪ್ರವಾಸ ಪೂರ್ಣಗೊಳಿಸಿ ಇದೀಗ ಕಲಬುರಗಿಗೆ ಆಗಮಿಸಿದ್ದೇವೆ. ಮುಂದಿನ ದಿನಗಳಲ್ಲಿ ರಾಜ್ಯದ ಉಳಿದ ಜಿಲ್ಲೆಗಳಿಗೂ ಪ್ರವಾಸ ಕೈಗೊಂಡು ಅಲ್ಪಸಂಖ್ಯಾತರ ವಿವಿಧ ಸಮಸ್ಯೆಗಳನ್ನು ಆಲಿಸಿ, ಅವುಗಳನ್ನು ಸರ್ಕಾರದ ಗಮನಕ್ಕೆ ತರುವ ಕೆಲಸ ಮಾಡಲಾಗುವುದು ಎಂದರು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಿವೇಶನಗಳಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಶೇ.8ರಷ್ಟು ನಿವೇಶನಗಳನ್ನು ಮೀಸಲಿಡಬೇಕು ಹಾಗೂ ಈ ಭಾಗದ ಜನರಿಗೆ ವಸತಿ ಸೌಲಭ್ಯ ಕಲ್ಪಿಸಬೇಕು ಎಂಬ ಬೇಡಿಕೆಯ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಬಗ್ಗೆ ಮುಂದಿನ ದಿನಗಳಲ್ಲಿ ಪರಿಶೀಲಿಸಲಾಗುವುದು ಎಂದು ಉತ್ತರಿಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕಿ ಖನೀಜ್ ಫಾತಿಮಾ, ಬಿಲ್ಕಿಸ್ ಬಾನು, ಮಝುಹರ್ ಖಾನ್ ಆಲಂ, ಅಹ್ಮದ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕಿರಣ್ ದೇಶಮುಖ್, ಫರಾಜ್ ಉಲ್ ಇಸ್ಲಾಂ ಹಾಗೂ ಕೆಪಿಸಿಸಿ ಸದಸ್ಯ ಲಾಲ್ ಅಹ್ಮದ್ ಸೇಠ್ ಮತ್ತಿತರರು ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ಶಾಂತಿಯುತ ಮತದಾನಕ್ಕೆ ಸಿದ್ಧತೆ ಕೈಗೊಳ್ಳಿ : ಶಿವಕುಮಾರ ಕೆ.ಬಿ.

ಕಲಬುರಗಿ,ಅ.08-

ಕರ್ನಾಟಕ ವಿಧಾನ ಪರಿಷತ್ತಿನ ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ಒಂದು ಸ್ಥಾನ ಆಯ್ಕೆಗೆ ಅ.23ರಂದು ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದರ ಜೊತೆಗೆ ಕ್ಷೇತ್ರದಾದ್ಯಂತ ಶಾಂತಿಯುತ ಹಾಗೂ ಮುಕ್ತ ಚುನಾವಣೆಗೆ ಅಗತ್ಯವಿರುವ ಎಲ್ಲ ರೀತಿಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಕ್ಷೇತ್ರದ ಡಿ.ಸಿ., ಎಸ್.ಪಿ.ಗಳಿಗೆ ಚುನಾವಣಾ ವೀಕ್ಷಕ ಶಿವಕುಮಾರ ಕೆ.ಬಿ. ಸೂಚನೆ ನೀಡಿದರು.



ಬುಧವಾರ ಇಲ್ಲಿನ ಪ್ರಾದೇಶಿಕ ಆಯುಕ್ತರ ಕಚೇರಿ ಸಭಾಂಗಣದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಕ್ಷೇತ್ರದ ವ್ಯಾಪ್ತಿಯ ಏಳು ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ಸಹಾಯಕ ಆಯುಕ್ತರು ಹಾಗೂ ತಹಶೀಲ್ದಾರರೊಂದಿಗೆ ಸಭೆ ನಡೆಸಿದ ಅವರು, ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸುವುದು ಚುನಾವಣಾ ಆಯೋಗದ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಯಾವುದೇ ಭಯ, ಆತಂಕವಿಲ್ಲದೆ ಶಾಂತಿಯುತವಾಗಿ ಮತದಾನ ನಡೆಯಲು ಸೂಕ್ತ ಭದ್ರತಾ ವ್ಯವಸ್ಥೆ ಕಲ್ಪಿಸಬೇಕು ಎಂದರು.

ಈಗಾಗಲೇ ಡಿ.30, 2025ರಂದು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಇದಾದ ಬಳಿಕ ಸೆ.29ರವರೆಗೆ ಸ್ವೀಕೃತವಾದ ನಮೂನೆ-19ರ ಅರ್ಜಿಗಳನ್ನು ಸಕಾಲದಲ್ಲಿ ವಿಲೇವಾರಿ ಮಾಡಿ ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ಧಪಡಿಸಬೇಕು ಎಂದು ಸೂಚಿಸಿದರು.

ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ಸಹಾಯಕ ಆಯುಕ್ತರು ಹಾಗೂ ತಹಶೀಲ್ದಾರರು ಕಡ್ಡಾಯವಾಗಿ ಮತದಾನ ಕೇಂದ್ರಗಳಿಗೆ ಭೇಟಿ ನೀಡಿ ಕನಿಷ್ಠ ಮೂಲಭೂತ ಸೌಕರ್ಯಗಳು ಇರುವುದನ್ನು ಖಚಿತಪಡಿಸಿಕೊಳ್ಳಬೇಕು. ಮತದಾನ ದಿನದಂದು ಮತಗಟ್ಟೆಗಳಿಗೆ ಅಗತ್ಯವಿರುವ ನಮೂನೆಗಳು, ಲಕೋಟೆಗಳು ಹಾಗೂ ಸ್ಟೇಷನರಿ ಸಾಮಗ್ರಿಗಳನ್ನು ಮಸ್ಟರಿಂಗ್ ದಿನದಂದು ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ವಿತರಿಸಬೇಕು ಎಂದು ಚುನಾವಣಾ ವೀಕ್ಷಕರು ತಿಳಿಸಿದರು.

ಚುನಾವಣಾ ಆಯೋಗದ ನಿರ್ದೇಶನದಂತೆ ಕ್ಷೇತ್ರದ ಪ್ರತಿ ಮತಗಟ್ಟೆಯ ಮೇಲೆ ನಿಗಾ ಇರಿಸಲು ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಬೇಕು. ಮೈಕ್ರೋ ವೀಕ್ಷಕರು ಹಾಗೂ ಮತಗಟ್ಟೆ ಅಧಿಕಾರಿ ಮತ್ತು ಸಿಬ್ಬಂದಿಗೆ ಅ.12 ಮತ್ತು 17ರಂದು ಎರಡು ಹಂತಗಳಲ್ಲಿ ತರಬೇತಿ ನೀಡಬೇಕು ಎಂದು ಎಲ್ಲ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಯಿತು.

ಮತದಾನ ಶಾಂತಿಯುತವಾಗಿ ನಡೆಯುವ ನಿಟ್ಟಿನಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ-1951ರ ಸೆಕ್ಷನ್ 135(ಸಿ) ಪ್ರಕಾರ, ಚುನಾವಣೆಯ ಮತದಾನ ಮುಕ್ತಾಯಗೊಳ್ಳುವ 48 ಗಂಟೆಗಳ ಮುಂಚಿತವಾಗಿ ಮತದಾನ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಅಕ್ಟೋಬರ್ 21ರ ಸಂಜೆ 4 ಗಂಟೆಯಿಂದಲೇ ಜಾರಿಗೆ ಬರುವಂತೆ ಎಲ್ಲ ಜಿಲ್ಲೆಗಳಲ್ಲಿ ಶುಷ್ಕ ದಿನ (ಡ್ರೈ ಡೇ) ಘೋಷಿಸಿ ಆದೇಶ ಹೊರಡಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತೆ ಝುಹೀರಾ ನಸೀಮ್, ಸಹಾಯಕ ಚುನಾವಣಾಧಿಕಾರಿಯಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ಕಲಬುರಗಿ ಜಿಲ್ಲಾ ಪಂಚಾಯಿತಿ ಸಿಇಓ ರಾಹುಲ್ ಸಂಕನೂರ್, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತ ಜುಬೇನ್ ಮೊಹಪಾತ್ರ, ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಅಭಿವೃದ್ಧಿ) ಹಾಗೂ ಪ್ರಭಾರಿ ಹೆಚ್ಚುವರಿ ಪ್ರಾದೇಶಿಕ ಆಯುಕ್ತೆ ಪ್ರಮೀಳಾ ಎಂ.ಕೆ., ಕಲಬುರಗಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಉಪಸ್ಥಿತರಿದ್ದರು. ಉಳಿದಂತೆ ಕ್ಷೇತ್ರದ ವ್ಯಾಪ್ತಿಯ ಏಳು ಜಿಲ್ಲೆಗಳ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

# ಕಾನೂನು ವಿದ್ಯಾರ್ಥಿಗಳು ವಿಶಾಲ ಜ್ಞಾನ ಬೆಳೆಸಿಕೊಳ್ಳಬೇಕು: ನ್ಯಾ.ಅಶೋಕ್ ಎಸ್.ಕಿಣಗಿ

ಕಲಬುರಗಿ,ಅ.08-

ಕಾನೂನು ವಿದ್ಯಾರ್ಥಿಗಳು ತಮ್ಮ ಪಠ್ಯಕ್ರಮದ ವಿಷಯಗಳಿಗೆ ಮಾತ್ರ ಸೀಮಿತವಾಗದೆ, ಇತಿಹಾಸ, ತತ್ವಶಾಸ್ತ್ರ, ಆರ್ಥಿಕತೆ ಹಾಗೂ ಸಮಾಜದ ಕುರಿತು ವಿಶಾಲವಾದ ತಿಳುವಳಿಕೆಯನ್ನು ಬೆಳೆಸಿಕೊಳ್ಳಬೇಕು ಎಂದು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ಅಶೋಕ್ ಎಸ್. ಕಿಣಗಿ ಕರೆ ನೀಡಿದರು.




ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕಾನೂನು ವಿಭಾಗದ ವತಿಯಿಂದ ಬುಧವಾರ ಸಿಯುಕೆ ಸಭಾಂಗಣದಲ್ಲಿ ಕಾನೂನು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪರಿಚಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮುಖ್ಯ ಭಾಷಣ ಮಾಡಿದರು.

ಕಾನೂನು ಕೇವಲ ಕಾಯಿದೆ, ಶಾಸನ ಅಥವಾ ಕಡತಗಳಿಗೆ ಸೀಮಿತವಾಗಿಲ್ಲ. ಅದು ಮೂಲತಃ ಜನರು ಮತ್ತು ಸಮಾಜಕ್ಕೆ ಸಂಬಂಧಿಸಿದ ವಿಷಯವಾಗಿದೆ ಎಂದು ನ್ಯಾಯಮೂರ್ತಿ ಕಿಣಗಿ ಹೇಳಿದರು. ಕಕ್ಷಿದಾರರ ಮಾತುಗಳನ್ನು ಎಚ್ಚರಿಕೆಯಿಂದ ಆಲಿಸುವುದು, ಪ್ರಕರಣದ ಪ್ರಮುಖ ಸಂಗತಿಗಳನ್ನು ಗುರುತಿಸುವುದು, ಅನ್ವಯವಾಗುವ ಕಾನೂನನ್ನು ತಿಳಿದುಕೊಳ್ಳುವುದು ಹಾಗೂ ಶಾಸನದ ಉದ್ದೇಶವನ್ನು ಅರ್ಥಮಾಡಿಕೊಳ್ಳುವುದು ವಕೀಲರಿಗೆ ಅತ್ಯಗತ್ಯ ಎಂದರು.

ಹಕ್ಕುಗಳ ರಕ್ಷಣೆ ಹಾಗೂ ಸಮಾಜದ ಸುಗಮ ಕಾರ್ಯನಿರ್ವಹಣೆಯಲ್ಲಿ ವಕೀಲರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಕಾನೂನು ನಿರ್ಧಾರಗಳು ಕೆಲವೊಮ್ಮೆ ಮಾನವ ಜೀವನದ ಮೇಲೆ ಗಂಭೀರ ಪರಿಣಾಮ ಬೀರಬಹುದಾದ ಹಿನ್ನೆಲೆಯಲ್ಲಿ ವಕೀಲರು ತಮ್ಮ ವೃತ್ತಿಪರ ಜವಾಬ್ದಾರಿಯನ್ನು ಜ್ಞಾನ, ಹೊಣೆಗಾರಿಕೆ ಮತ್ತು ಸೂಕ್ಷ್ಮತೆಯಿಂದ ನಿರ್ವಹಿಸಬೇಕು ಎಂದು ಹೇಳಿದರು.

ತೀರ್ಪಿನ ಮುಖ್ಯಾಂಶಗಳನ್ನು ಮಾತ್ರ ಓದದೆ, ಸಂಪೂರ್ಣ ತೀರ್ಪನ್ನು ಓದಿ, ಅದರಲ್ಲಿರುವ ನ್ಯಾಯಾಂಗದ ತರ್ಕ ಹಾಗೂ ತೀರ್ಪಿಗೆ ಆಧಾರವಾಗಿರುವ ಕಾನೂನು ತತ್ವಗಳನ್ನು ಅರ್ಥಮಾಡಿಕೊಳ್ಳಬೇಕು. ಪರಿಣಾಮಕಾರಿ ಕಾನೂನು ವೃತ್ತಿಗೆ ನ್ಯಾಯಾಂಗದ ತರ್ಕ ಮತ್ತು ಕಾನೂನು ತತ್ವಗಳ ಸಮಗ್ರ ಅರಿವು ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತನ್ನು ಕಾಪಾಡಿಕೊಂಡು ಕಠಿಣ ಪರಿಶ್ರಮದೊಂದಿಗೆ ಕಾನೂನು ವೃತ್ತಿಗೆ ಅಗತ್ಯವಾದ ಸಾಮರ್ಥ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾನೂನು ವೃತ್ತಿಯು ಮಹತ್ವದ ವೃತ್ತಿಯಾಗಿದ್ದು, ವಿಶ್ವವಿದ್ಯಾಲಯದಲ್ಲಿ ದೊರೆಯುವ ಶೈಕ್ಷಣಿಕ ಹಾಗೂ ಇತರ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಸಭೆಯನ್ನುದ್ದೇಶಿಸಿ ಕಾನೂನು ವಿಭಾಗದ ಡೀನ್ ಪ್ರೊ. ಬಸವರಾಜ ಎಂ. ಕುಬಕಡ್ಡಿ ಮಾತನಾಡಿದರು. ಕಾನೂನು ವಿಭಾಗದ ಮುಖ್ಯಸ್ಥ ಡಾ. ಅನಂತ ಡಿ. ಚಿಂಚುರೆ ಸ್ವಾಗತ ಭಾಷಣ ಮಾಡಿದರು. ಕಾರ್ಯಕ್ರಮ ಸಂಯೋಜಕ ಡಾ. ಜಗದೀಶ್ ಚಂದ್ರ ವಂದನಾರ್ಪಣೆ ಸಲ್ಲಿಸಿದರು. ಡಾ. ವೈಷ್ಣವಿ ನಾರಾಯಣಿ ಕಾರ್ಯಕ್ರಮ ನಿರೂಪಿಸಿದರು.

ಕಾನೂನು ವಿಭಾಗದ ಪ್ರಾಧ್ಯಾಪಕರಾದ ಡಾ. ಶಶಿರೇಖಾ ಮಾಳಗಿ, ಡಾ. ರೇಣುಕಾ ಗುಬ್ಬೆವಾಡ, ಡಾ. ಜಯಂತ ಬೊರುವಾ, ಡಾ. ಕೆ.ಎಂ. ಕೃಷ್ಣ ಶೇಖರ್ ಶರ್ಮಾ ಹಾಗೂ ಜುನು ದಾಸ್ ಸೇರಿದಂತೆ ಸಂಶೋಧನಾ ವಿದ್ಯಾರ್ಥಿಗಳು, ಬಿ.ಎ.ಎಲ್.ಎಲ್.ಬಿ. ಹಾಗೂ ಎಲ್.ಎಲ್.ಎಂ. ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಒಂದನೇಯ ಪುಟದಿಂದ

# ರಾಜ್ಯ ಕಾಂಗ್ರೆಸ್‌ನಿಂದ ಪ್ರಜಾಪ್ರಭುತ್ವ ಕರಾಳ ದಿನ ಪ್ರತಿಭಟನೆ

ಅಮಿತ್ ಶಾ ಸೇರಿ ತಪ್ಪಿತಸ್ಥರಿಗೆ ಶಿಕ್ಷೆಯಾಗುವವರೆಗೂ ಈ ಹೋರಾಟ ಮುಂದುವರಿಸುತ್ತೇವೆ ಎಂದು ತಿಳಿಸಿದರು.

ಉತ್ತರ ಭಾರತದವರು ಬಂದು ಸ್ಟಿಂಗ್‌ಗೆ ಯತ್ನ: ಇದೇ ವೇಳೆ ಮಾತನಾಡಿದ ಸಚಿವ ಸತೀಶ್ ಜಾರಕಿಹೊಳಿ, ಸ್ಟಿಂಗ್ ಆಪರೇಷನ್ ಬಗ್ಗೆ ಪ್ರತಿಕ್ರಿಯಿಸುತ್ತಾ, ಸಿಎಂ ಹೇಳಿದ ಮೇಲೆ ಮತ್ತೇನು ಹೇಳೋದು. ಈಗಾಗಲೇ ಕ್ಯಾಬಿನೆಟ್‌ನಲ್ಲಿ ಚರ್ಚೆ ಆಗಿದೆ. ಕೆಲವು ಸಚಿವರು ಈ ಬಗ್ಗೆ ಮಾತನಾಡಿದ್ದಾರೆ. ನಮ್ಮ ಕೋರ್ಟ್‌ನಲ್ಲಿ ಅದಿಲ್ಲ. ಸಿಎಂ ನಮ್ಮ ಜೊತೆ ಮಾಹಿತಿ ಹಂಚಿಕೊಂಡಿದ್ರು. ಉತ್ತರ ಭಾರತದವರು ಬಂದಿದ್ರು. ನನ್ನನ್ನೇ ಟ್ರ್ಯಾಪ್ ಮಾಡಲು ಯತ್ನಿಸಿದ್ರು ಅಂತ ಹೇಳಿದ್ರು. ನಿಮ್ಮನ್ನು ಬಿಡ್ತಾರ ಎಂದು ನಮಗೆ ಸಲಹೆ ಕೊಟ್ಟಿದ್ದಾರೆ ಎಂದು ತಿಳಿಸಿದರು.

# ರೈತರನ್ನು ಯಾವುದೇ ಕಾರಣಕ್ಕೂ ಸಂಕಷ್ಟದಲ್ಲಿ ಇರಲು ಬಿಡುವುದಿಲ್ಲ: ಡಾ. ಜಿ. ಪರಮೇಶ್ವರ್

ವೀಕ್ಷಣೆ ಮಾಡಿ, ನಂತರ ಮಾಧ್ಯಮದವರಿಗೆ ಮಾಹಿತಿ ನೀಡಿ ಮಾತನಾಡಿದರು.

ರೈತರಿಗೆ ಆಗಿರುವ ಭೀಕರ ನಷ್ಟವನ್ನು ಗಮನಿಸಿ ಈಗಾಗಲೇ ಮುಂಗಡವಾಗಿ ಪರಿಹಾರ ನೀಡುವ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜಿಲ್ಲಾಧಿಕಾರಿಗಳ ಹತ್ತಿರ ಕುಡಿಯುವ ನೀರು, ಮೇವು ಮತ್ತು ಬರ ನಿರ್ವಹಣೆಗಾಗಿ ಸಾಕಷ್ಟು ಹಣವನ್ನು ಕಾಯ್ದಿರಿಸಲಾಗಿದ್ದು, ಸುಮಾರು 329 ಕೋಟಿ ರೂಪಾಯಿಗಳ ಅನುದಾನ ರಾಜ್ಯದಲ್ಲಿ ಇದಕ್ಕೆ ನೀಡಲಾಗಿದೆ ಎಂದರು.

ಕೇಂದ್ರ ಸರ್ಕಾರದ ನಿಯಮದಂತೆ ಶೇಕಡಾ 33ಕ್ಕಿಂತ ಹೆಚ್ಚು ಬೆಳೆ ನಷ್ಟವಾಗಿದ್ದರೆ ಪ್ರತಿ ಹೆಕ್ಟೇರ್‌ಗೆ 8,500 ರೂಪಾಯಿ ನೀಡಲು ತೀರ್ಮಾನಿಸಲಾಗಿದ್ದು, ಈಗಾಗಲೇ ರಾಜ್ಯ ಸರ್ಕಾರದಿಂದ ಮೊದಲನೇ ಕಂತಿನಲ್ಲಿ 1,250 ಕೋಟಿ ರೂಪಾಯಿಗಳನ್ನು ನೀಡಲಾಗಿದೆ ಎಂದರು.

ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆ ಮತ್ತು ಪವರ್ ಕಟ್ ಕುರಿತಂತೆ ರೈತರ ಸಮಸ್ಯೆಗಳಿಗೆ ಸ್ಪಂದಿಸಲು ಕ್ರಮ ಕೈಗೊಳ್ಳಲಾಗಿದೆ ಹಾಗೂ ಯಾವುದೇ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಿಲ್ಲ. ಬರಗಾಲದ ಈ ಪರಿಸ್ಥಿತಿಯಲ್ಲಿ ರೈತರು ಹಾಗೂ ಬಡವರ ಹಿತಾಸಕ್ತಿ ಕಾಪಾಡಲು ಸರ್ಕಾರ ಸಂಪೂರ್ಣ ಬದ್ಧವಾಗಿದೆ ಎಂದರು.

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ,

ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ,ಸಹಾಯಕ ಆಯುಕ್ತರಾದ ನಾಗೇಂದ್ರ ಬಾಬು ಕುಮಾ,ರ್ಡಾ.ಹಂಪಣ್ಣ ಸಜ್ಜನ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಹಶಿಲ್ದಾರ್ ಅರುಣ್ ಕುಮಾರ್ ದೇಸಾಯಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಉಪ ಮುಖ್ಯಮಂತ್ರಿಗಳಿಂದ ರಾಯಚೂರು ಜಿಲ್ಲೆಯಲ್ಲಿ ಬೆಳೆ ಹಾನಿ ಪರಿಶೀಲನೆ

ಸರ್ಕಾರವು ರೈತರು ಮತ್ತು ಕೂಲಿ ಕಾರ್ಮಿಕರ ಪರವಾಗಿದೆ. ಕಳೆದ ಜೂನ್ ತಿಂಗಳಿನಲ್ಲೇ ಸಚಿವರು ಮತ್ತು ಅಧಿಕಾರಿಗಳ ಸಭೆ ನಡೆಸಿ ಪರಿಸ್ಥಿತಿಯ ಪರಾಮರ್ಶೆ ನಡೆಸಲಾಗಿದೆ. ಅಲ್ಲದೆ ವಿಧಾನ ಸೌಧದಲ್ಲಿವಿರೋಧ ಪಕ್ಷಗಳೊಂದಿಗೆ ಚರ್ಚಿಸಲು ನಾಲ್ಕು ದಿನಗಳ ಕಾಲ ವಿಶೇಷ ಅಧಿವೇಶನವನ್ನು ಸಹ ಕರೆಯಲಾಗಿತ್ತು ಎಂದರು.

ಸರ್ಕಾರವು ಕೊಟ್ಟಿರುವ ಎಲ್ಲಾ ಗ್ಯಾರಂಟಿಗಳನ್ನು ಈಡೇರಿಸಲಾಗುತ್ತಿದ್ದು, ಅದರಂತೆ ಅಕ್ಕಿ, ಬಸ್ ಸೌಲಭ್ಯ ಸೇರಿದಂತೆ ಇತರೆ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ರೈತರಿಗಾಗಿ ಒಟ್ಟು 1,250 ಕೋಟಿ ರೂಪಾಯಿಗಳನ್ನು ಘೋಷಿಸಲಾಗಿದೆ. ಒಬ್ಬ ರೈತನಿಗೆ 2500ರೂಪಾಯಿಗಳಂತೆ ಪರಿಹಾರ ನೀಡಲಾಗುತ್ತಿದ್ದು, ಕೇಂದ್ರ ಸರ್ಕಾರವು 8,000 ರೂಪಾಯಿಗಳನ್ನು ಕೊಡುವ ನಿಯಮ ಮಾಡಿದ್ದರೂ ಸಹ ರಾಜ್ಯ ಸರ್ಕಾರವು ರೈತರ ಪರವಾಗಿ ನಿಂತು ಈ ನೆರವು ನೀಡುತ್ತಿದೆ.

ಕುಡಿಯುವ ನೀರು ಹಾಗೂ ಮೇವಿನ ವ್ಯವಸ್ಥೆ: ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಈಗಾಗಲೇ 306 ಕೋಟಿ ರೂಪಾಯಿಗಳನ್ನು ರಾಜ್ಯದ ವಿವಿಧ ಕ್ಷೇತ್ರಗಳಿಗೆ ಬಿಡುಗಡೆ ಮಾಡಲಾಗಿದೆ. ಇದರೊಂದಿಗೆ ಜಾನುವಾರುಗಳಿಗೆ ಮೇವು ಮತ್ತು ಮೇವಿನ ಕಿಟ್ ಒದಗಿಸಲು 25 ಕೋಟಿ ರೂಪಾಯಿಗಳನ್ನು ಜಿಲ್ಲಾಧಿಕಾರಿಗಳ ಮುಖಾಂತರ ಮೇವು ಬ್ಯಾಂಕ್‌ಗಳಿಗೆ ನೀಡಲಾಗಿದೆ ಎಂದರು.

ವಿದ್ಯುತ್ ಸರಬರಾಜು ಸಮಸ್ಯೆಗೆ ಕಡಿವಾಣ:ರೈತರ ಪಂಪ್‌ಸೆಟ್‌ಗಳಿಗೆ ನಿರಂತರವಾಗಿ 6 ಗಂಟೆಗಳ ಕಾಲ ವಿದ್ಯುತ್ ಪೂರೈಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ತಾಂತ್ರಿಕ ದೋಷಗಳನ್ನು ಸರಿಪಡಿಸಿ ರೈತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಈ ಕುರಿತು ಮೇಲಾಧಿಕಾರಿಗಳು ಹೆಚ್ಚಿನ ಗಮನಹರಿಸಬೇಕೆಂದು ಉಪ ಮುಖ್ಯಮಂತ್ರಿಗಳು ಸೂಚಿಸಿದರು.

ವಿಜಿರಾಮ್ ಜಿ ಯೋಜನೆಯಡಿಯಲ್ಲಿ ಕೆಲಸ ಮಾಡಿದ ಕೂಲಿಕಾರ್ಮಿಕ ಒಂದು ವಾರದೊಳಗೆ ಪೇಮೆಂಟ್ ಕಡ್ಡಾಯವಾಗಿ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು.

ನಾಲ್ಕು ಕ್ವಿಂಟಲ್ ತೊಗರಿ ಬಿತ್ತನೆ ಮಾಡಲಾಗಿದ್ದು, ಸರಿಯಾದ ಸಮಯಕ್ಕೆ ಮಳೆ ಬಾರದೆ ಬಿತ್ತನೆ ಮಾಡಿದ ಬೆಳೆ ಸಂಪೂರ್ಣವಾಗಿ ನಾಶವಾಗಿದೆ. ಎಕರೆಗೆ 50 ಸಾವಿರ ರೂ.ಗಳನ್ನು ಸರ್ಕಾರದ ವತಿಯಿಂದ ಪರಿಹಾರ ನೀಡಿ, ರೈತರಿಗೆ ಅನುಕೂಲ ಮಾಡಬೇಕು ಎಂದು ಊಮಲೂಟಿ ಗ್ರಾಮದ ಹೊಲದ ಮಾಲೀಕನಾದ ಭೀರಮಲ್ಲಪ್ಪ ಮನವಿ ಮಾಡಿದರು.ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ,ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ,ಸಹಾಯಕ ಆಯುಕ್ತರಾದ ನಾಗೇಂದ್ರ ಬಾಬು ಕುಮಾ,ರ್ಡಾ.ಹಂಪಣ್ಣ ಸಜ್ಜನ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ತಹಶಿಲ್ದಾರ್ ಅರುಣ್ ಕುಮಾರ್ ದೇಸಾಯಿ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು .

# ಸಿಂದೊಳ್ಳು ಅಲೆಮಾರಿ ಜನಾಂಗಕ್ಕೆ ನಿವೇಶನಕ್ಕೆ ಆಗ್ರಹ

ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಶಾಮಣ್ಣ ,ಸಮಾಜದ ಮುಖಂಡರು, ಮತ್ತು ಮಹಿಳೆಯರು ಭಾಗವಹಿಸಿದ್ದರು.

# ಕರ್ನಾಟಕ ಧಮ್ಮ ಜನಜಾಗೃತಿ ಯಾತ್ರೆ ರಥಕ್ಕೆ ದೇವದುರ್ಗದಲ್ಲಿ ಅದ್ದೂರಿ ಸ್ವಾಗತ

ಧಮ್ಮ ಜನಜಾಗೃತಿ ಯಾತ್ರೆ ಆಯೋಜಿಸಲಾಗಿದೆ ಎಂದು ಅವರು ಹೇಳಿದರು.

ಐತಿಹಾಸಿಕ ಹಾಗೂ ಮಂಗಳಮಯ ಸನ್ನತಿ (ಕನಗನಹಳ್ಳಿ) ನೆಲದಲ್ಲಿ ಸುಮಾರು 5 ಲಕ್ಷ ಉಪಾಸಕಉಪಾಸಿಕೆಯರು ಬೌದ್ಧ ಧಮ್ಮದೀಕ್ಷೆ ಸ್ವೀಕರಿಸುವ ಭವ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಸನ್ನತಿಯ ಬೌದ್ಧ ಪರಂಪರೆಯ ಸಂರಕ್ಷಣೆ ಮತ್ತು ಅಭಿವೃದ್ಧಿ ಎಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಸಂವಿಧಾನ ಆಧಾರಿತ ಪ್ರಬುದ್ಧ ಭಾರತ ನಿರ್ಮಾಣಕ್ಕಾಗಿ ಹಾಗೂ 70ನೇ ಬೌದ್ಧ ಧಮ್ಮ ದೀಕ್ಷೆಯ ಪ್ರಯುಕ್ತ, ಚಿತ್ತಾಪುರ ತಾಲೂಕಿನ ಸನ್ನತಿ (ಕನಗನಹಳ್ಳಿ)ಯ ಪ್ರಾಚೀನ ಸಾಮ್ರಾಟ್ ಅಶೋಕ ಸ್ತೂಪದ ಆವರಣದಲ್ಲಿ ನವೆಂಬರ್ 1, 2026ರಂದು ಬೆಳಗ್ಗೆ 11 ಗಂಟೆಗೆ ಭವ್ಯ ಬೌದ್ಧ ಧಮ್ಮ ದೀಕ್ಷಾ ಸಮಾರಂಭ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಈ ಐತಿಹಾಸಿಕ ಅಭಿಯಾನದಲ್ಲಿ ಅಂಬೇಡ್ಕರ್‌ವಾದಿಗಳು, ಬೌದ್ಧ ಅನುಯಾಯಿಗಳು, ಭಿಕ್ಷು ಸಂಘ, ಉಪಾಸಕ ಉಪಾಸಿಕಾ ಸಂಘ, ಸಾಮಾಜಿಕ ಹಾಗೂ ರಾಜಕೀಯ ಮುಖಂಡರು, ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ, ಇತರೆ ಹಿಂದುಳಿದ ವರ್ಗಗಳು ಹಾಗೂ ಎಲ್ಲಾ ಬಹುಜನ ಸಂಘಟನೆಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಅಂತಾರಾಷ್ಟ್ರೀಯ ಬೌದ್ಧ ಯುವ ಸಂಘಟನೆ ಭಾರತ, ಗ್ಲೋಬಲ್ ಡಾ. ಅಂಬೇಡ್ಕರ್ ಬೌದ್ಧ ಮಿಷನ್, ಯು.ಎಸ್.ಎ., ಅಖಿಲ ಭಾರತ ಡಾ. ಅಂಬೇಡ್ಕರ್ ಭಿಕ್ಕು ಸಂಘ ಹಾಗೂ ಬೌದ್ಧ ಮಹಾಶದ ಅಭಿವೃದ್ಧಿ ಮತ್ತು ಸಂರಕ್ಷಣಾ ಸಂಸ್ಥೆ, ಸನ್ನತಿ (ಕನಗನಹಳ್ಳಿ) ಇವರ ಸಂಯುಕ್ತಾಶ್ರಯದಲ್ಲಿ ಧಮ್ಮ ಜನಜಾಗೃತಿ ಯಾತ್ರೆಯನ್ನು ಆಯೋಜಿಸಲಾಗಿದೆ.

ಈ ಸಂದರ್ಭದಲ್ಲಿ ಹಿರಿಯರಾದ ಮಲ್ಲೇಶಪ್ಪ ಹುನಗುಂದಬಾಡ, ಎನ್. ಲಿಂಗಪ್ಪ ಜಾಲಹಳ್ಳಿ, ಹುಸೇನಪ್ಪ ಜಾಲಹಳ್ಳಿ, ರಂಗಪ್ಪ ಗೋಸಲ್, ಮಹಾಂತೇಶ್ ಭವಾನಿ, ಹನುಮಂತ ಮನ್ನಾಪುರ, ವಿಶ್ವನಾಥ್ ಬಲ್ಲಿದವ್, ಮುನಿಯಪ್ಪ ನಾಗೋಲಿ, ಮೋಹನ್ ಬಲ್ಲಿದವ್, ಶಿವರಾಜ ರುದ್ರಾಕ್ಷಿ, ಗುಂಡಪ್ಪ ನಾಯಕ, ದೇವಪ್ಪ ಬಡಿಗೇರ್ ಚಿಂಚೋಡಿ, ರಂಗನಾಥ್ ಕೊಂಬಿನ್, ಮಲ್ಲಿಕಾರ್ಜುನ ಬೊಮ್ಮನಾಳ, ಶಿವು ಅಂಚೆಸೂಗೂರ ಆಕಾಶ್ ತೆಲ್ಕರ ರಾಹುಲ್ ದೇವದುರ್ಗ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

# ನೀರಿಗಾಗಿ ಅಳ್ಳಗಿ(ಬಿ)ಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ



ಅಫಜಲಪುರ,ಅ.08-

ತಾಲೂಕಿನಲ್ಲಿ ತೀವ್ರ ಬರಗಾಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಮುಂದಿನ ದಿನಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆ ಇದೆ. ಇದೇ ಸಂದರ್ಭದಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಕಡಿತ ಮಾಡುವ ಕುರಿತು ಚರ್ಚೆಗಳು ನಡೆಯುತ್ತಿದ್ದು, ಇದರಿಂದ ಕೃಷಿ ಚಟುವಟಿಕೆಗಳು ಸಂಪೂರ್ಣ ಸ್ಥಗಿತಗೊಳ್ಳುವ ಆತಂಕ ಎದುರಾಗಿದೆ ಎಂದು ಶಾಶ್ವತ ನೀರಾವರಿ ಹೋರಾಟ ಸಮಿತಿ ತಿಳಿಸಿದೆ.

ಪಟ್ಟಣದ ಶ್ರೀ ಗುರು ಮಳೆಂದ್ರ ಮಠದಲ್ಲಿ ಹೋರಾಟದ ಬಿತ್ತಿಪತ್ರ ಬಿಡುಗಡೆಗೊಳಿಸಿ ಮಾತನಾಡಿದ ಶಾಶ್ವತ ನೀರಾವರಿ ಹೋರಾಟ ಸಮಿತಿಯ ರೈತ ಮುಖಂಡರು, ಮಹಾರಾಷ್ಟ್ರದಿಂದ ಹೆಚ್ಚುವರಿ ನೀರು ತರಬೇಕು, ತಾಲೂಕಿನ ಕೆರೆಗಳನ್ನು ತಕ್ಷಣವೇ ತುಂಬಿಸಬೇಕು, ಕಾಲುವೆಗಳಿಗೆ ನೀರು ಹರಿಸಬೇಕು ಹಾಗೂ ಕಬ್ಬಿಗೆ ಪ್ರತಿ ಟನ್‌ಗೆ 5,500 ರೂ. ಬೆಂಬಲ ಬೆಲೆ ಘೋಷಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು.

ಮುಖಂಡ ರಮೇಶ್ ಪಾಟೀಲ ಮಾತನಾಡಿ, ಅಕ್ಟೋಬರ್ 14ರಂದು ಅಳ್ಳಗಿ (ಬಿ) ಗ್ರಾಮದಿಂದ ಕಲಬುರಗಿ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ತಾಲೂಕಿನ ನೀರಿನ ಸಮಸ್ಯೆ ಸೇರಿದಂತೆ ರೈತರ ವಿವಿಧ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತರುವ ಉದ್ದೇಶದಿಂದ ಈ ಹೋರಾಟವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ರೈತ ಮುಖಂಡ ಗುರು ಚಾಂದಕವಟೆ ಮಾತನಾಡಿ, ಪಾದಯಾತ್ರೆಯಲ್ಲಿ ತಾಲೂಕಿನ ವಿವಿಧ ಮಠಾಧೀಶರು, ಬುದ್ಧಿಜೀವಿಗಳು, ರೈತ ಸಂಘಟನೆಗಳು, ವಿದ್ಯಾರ್ಥಿಗಳು, ವಕೀಲರ ಸಂಘ, ದಲಿತ ಹಾಗೂ ಮಹಿಳಾ ಸಂಘಟನೆಗಳು ಸೇರಿದಂತೆ ವಿವಿಧ ಪ್ರಗತಿಪರ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದರು.

ಶ್ರೀಮಂತ ಬಿರಾದಾರ ಮಾತನಾಡಿ, ತಾಲೂಕಿನ ಜನರ ಕುಡಿಯುವ ನೀರು, ರೈತರ ಕೃಷಿ ಹಾಗೂ ಬದುಕಿನ ರಕ್ಷಣೆಯ ಉದ್ದೇಶದಿಂದ ನಡೆಯುತ್ತಿರುವ ಈ ಹೋರಾಟಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಂಬಲ ನೀಡಬೇಕು ಎಂದು ಶಾಶ್ವತ ನೀರಾವರಿ ಹೋರಾಟ ಸಮಿತಿ ವತಿಯಿಂದ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಶಾಶ್ವತ ನೀರಾವರಿ ಹೋರಾಟ ಸಮಿತಿಯ ಮುಖಂಡರಾದ ಶಾಂತು ಅಂಜುಟಗಿ, ರಮೇಶ್ ಶೆಟ್ಟಿ, ಚಿದಾನಂದ ಮಠ, ಶಿವಾನಂದ ಕೊಳಕೂರ, ಚಂದು ಬನ್ನೇಟಿ, ಸಿದ್ದು ಪಾಟೀಲ, ಗುರು ಚಾಂದಕವಟೆ, ಬಸು ಮಂಗಳೂರ, ನೂರಹಮದ್ ಬಾಗವಾನ್, ಶಿವಪುತ್ರ ಬುರ್ಲಿ ಹಾಗೂ ಚಂದು ಕರ್ಜಗಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದು, ಪಾದಯಾತ್ರೆಯನ್ನು ಯಶಸ್ವಿಗೊಳಿಸುವಂತೆ ಕರೆ ನೀಡಿದರು.



# ಮೊಬೈಲ್ ಬಳಕೆ ಕಡಿಮೆ ಮಾಡಿ ಮಕ್ಕಳಲ್ಲಿ ಕಲಾಸಕ್ತಿ ಬೆಳೆಸಿ: ಸಿದ್ರಾಮ ಸಿಂಧೆ

ಬೀದರ್,ಅ.08-

ಇಂದಿನ ಮಕ್ಕಳು ಮೊಬೈಲ್ ಬಳಕೆಗೆ ಹೆಚ್ಚು ಸಮಯ ಮೀಸಲಿಡುತ್ತಿದ್ದಾರೆ. ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಮಕ್ಕಳಲ್ಲಿ ಕಲಾಸಕ್ತಿ ಹೆಚ್ಚಿಸುವ ಕೆಲಸವಾಗಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ ಸಿಂಧೆ ಹೇಳಿದರು.

ನಗರದ ಮೈಲೂರ್ ರಸ್ತೆಯಲ್ಲಿರುವ ವಿದ್ಯಾಶ್ರೀ ಮಾದರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿದ್ಯಾಶ್ರೀ ಮಾದರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಸಂಯುಕ್ತಾಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಚಿಗುರು2026-27 ಬಾಲ ಪ್ರತಿಭೆಗಳ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮೊಬೈಲ್ ಬಳಕೆಯಿಂದ ಮಕ್ಕಳ ಸೃಜನಶೀಲ ಚಟುವಟಿಕೆಗಳಿಗೆ ಕೆಲವೊಮ್ಮೆ ಹಿನ್ನಡೆಯಾಗುತ್ತಿದೆ. ಮಕ್ಕಳನ್ನು ನಮ್ಮ ಕಲೆ, ಸಂಸ್ಕೃತಿ ಹಾಗೂ ಪರಂಪರೆಯೊಂದಿಗೆ ಬೆಸೆಯುವ ಅಗತ್ಯವಿದೆ ಎಂದರು.

ಪ್ರಾಂಶುಪಾಲ ರಾಘವೇಂದ್ರ ಕುಲಕರ್ಣಿ ಮಾತನಾಡಿ, ಮಕ್ಕಳಿಗಾಗಿ ಇಂತಹ ವಿನೂತನ ಕಾರ್ಯಕ್ರಮ ಆಯೋಜಿಸಿರುವುದು ಶ್ಲಾಘನೀಯ. ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಬೆಳೆಸಲು ಇಂತಹ ವೇದಿಕೆಗಳು ಅಗತ್ಯ. ವಿವಿಧ ಕಲಾ ಪ್ರಕಾರಗಳಲ್ಲಿ ಮಕ್ಕಳು ಭಾಗವಹಿಸುವುದರಿಂದ ಅವರಲ್ಲಿರುವ ಪ್ರತಿಭೆ ಹೊರಹೊಮ್ಮುವುದರ ಜೊತೆಗೆ ಆತ್ಮವಿಶ್ವಾಸವೂ ಹೆಚ್ಚುತ್ತದೆ ಎಂದು ನುಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ವಿವಿಧ ರೀತಿಯ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಈ ಸಂದರ್ಭದಲ್ಲಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಗಣಪತಿ ಸೋಲಪೂರೆ, ಮುರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಚಾರ್ಯ ಚೆನ್ನಬಸವ ಹೇಡೆ, ಉಪನ್ಯಾಸಕ ದೇವಿದಾಸ್ ಜೋಶಿ, ಜನಪದ ಕಲಾವಿದರ ಬಳಗದ ಅಧ್ಯಕ್ಷ ವಿಜಯಕುಮಾರ್ ಸೋನಾರೆ, ಪತ್ರಕರ್ತ ಶಶಿಕಾಂತ್ ಬಂಬುಳಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿಗಳಾದ ಪ್ರವೀಣ್, ಗುರು ಹಾಗೂ ಶಾಲೆಯ ಸಿಬ್ಬಂದಿ ವರ್ಗ, ಪೋಷಕರು ಮತ್ತು ಮಕ್ಕಳು ಉಪಸ್ಥಿತರಿದ್ದರು. ಸರಸ್ವತಿ ಶೀಲವಂತ್ ಸ್ವಾಗತಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಕ್ಲೈಮೆಂಟಿನಾ ನಿರೂಪಿಸಿದರು. ಚಂದ್ರಕಾಂತ್ ವಂದಿಸಿದರು.



# ಅರ್ಹ ವೈದ್ಯಕೀಯ ಪದವಿ ಇಲ್ಲದೆ ವೈದ್ಯವೃತ್ತಿ : ಚಾಂದೋರಿ ಗ್ರಾಮದಲ್ಲಿ ಕ್ಲಿನಿಕ್ ಸೀಜ್

ಬೀದರ್,ಅ.07-

ಔರಾದ್ ತಾಲೂಕಿನ ಚಾಂದೋರಿ ಗ್ರಾಮದಲ್ಲಿ ಯಾವುದೇ ಅರ್ಹ ವೈದ್ಯಕೀಯ ಪದವಿ ಇಲ್ಲದೆ ವೈದ್ಯವೃತ್ತಿ ನಡೆಸುತ್ತಿದ್ದ ಆರೋಪದಡಿ ಪ್ರೇಮಕುಮಾರ್ ಎಂಬುವವರ ಕ್ಲಿನಿಕ್‌ನ್ನು ಅಧಿಕಾರಿಗಳು ಸೀಜ್ ಮಾಡಿದ್ದಾರೆ.

ಚಾಂದೋರಿ ಗ್ರಾಮದಲ್ಲಿ ಪ್ರೇಮಕುಮಾರ್ ಅವರು ಯಾವುದೇ ಅರ್ಹ ವೈದ್ಯಕೀಯ ಪದವಿ ಇಲ್ಲದೆ ಅಕ್ರಮವಾಗಿ ವೈದ್ಯಕೀಯ ವೃತ್ತಿ ನಡೆಸುತ್ತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಸೋಮವಾರ ರಾತ್ರಿ 7 ಗಂಟೆಗೆ ಅಧಿಕಾರಿಗಳು ಅನಿರೀಕ್ಷಿತ ದಾಳಿ ನಡೆಸಿ ಕ್ಲಿನಿಕ್‌ನ್ನು ಸೀಜ್ ಮಾಡಿದ್ದಾರೆ.

ಬೀದರ್ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸೂಚನೆಯಂತೆ ಈ ದಾಳಿ ನಡೆಸಲಾಗಿದೆ. ಈ ಹಿಂದೆ ಪ್ರೇಮಕುಮಾರ್ ಅವರು ಮುಧೋಳ್ (ಬಿ) ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸರ್ಕಾರಿ ಶುಶ್ರೂಷಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗಲೂ ಖಾಸಗಿ ಕ್ಲಿನಿಕ್ ನಡೆಸುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದವು. ಈ ಹಿನ್ನೆಲೆಯಲ್ಲಿ ಅವರ ಕ್ಲಿನಿಕ್ ಮೇಲೆ ದಾಳಿ ನಡೆಸಿ ಸೀಜ್ ಮಾಡಲಾಗಿತ್ತು. ಬಳಿಕ ಬೆಂಗಳೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕರು ಜ. 31ರಂದು ಅವರನ್ನು ಸರ್ಕಾರಿ ಸೇವೆಯಿಂದ ಅಮಾನತುಗೊಳಿಸಿದ್ದರು ಎಂದು ತಿಳಿದುಬಂದಿದೆ.

ದಾಳಿಯ ಸಂದರ್ಭದಲ್ಲಿ ಔರಾದ್ ತಾಲೂಕು ಆರೋಗ್ಯಾಧಿಕಾರಿ ಡಾ. ಅನಿಲಕುಮಾರ್ ಎಕಲೂರೆ, ಕೆಪಿಎಂಇ ವಿಷಯ ನಿರ್ವಾಹಕ ಮಹೇಶ್ವರರೆಡ್ಡಿ, ಪೊಲೀಸ್ ಸಿಬ್ಬಂದಿ ಅಶೋಕ್ ಹಾಗೂ ಸಿಬ್ಬಂದಿ ಬಲಭೀಮ ಮತ್ತು ಸಿದ್ದು ಉಪಸ್ಥಿತರಿದ್ದರು.

# ಭೈರಾಮಡಗಿಯಲ್ಲಿ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರಕ್ಕೆ ಚಾಲನೆ



ಕಲಬುರಗಿ, ಅ.08-

ಅಫಜಲಪುರ ತಾಲೂಕಿನ ಭೈರಾಮಡಗಿ ಗ್ರಾಮದಲ್ಲಿ ರಾಯಚೂರು ಕೃಷಿ ವಿಶ್ವವಿದ್ಯಾಲಯದ ಅಧೀನದ ಕೃಷಿ ಮಹಾವಿದ್ಯಾಲಯ, ಕಲಬುರಗಿಯ ಅಂತಿಮ ವರ್ಷದ ಬಿ.ಎಸ್ಸಿ . (ಕೃಷಿ) ವಿದ್ಯಾರ್ಥಿಗಳ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರಕ್ಕೆ ಚಾಲನೆ ನೀಡಲಾಯಿತು.

ಗ್ರಾಮದ ಪ್ರಮುಖರು ಹಾಗೂ ಪ್ರಗತಿಪರ ರೈತರ ಸಮ್ಮುಖದಲ್ಲಿ ನಡೆದ ಕಾರ್ಯಕ್ರಮವನ್ನು ಪ್ರಗತಿಪರ ರೈತ ಶರಣಗೌಡ ಅಣ್ಣಾರಾವ್ ಪಾಟೀಲ್ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು. ಮಾತನಾಡಿದ ಅವರು, ರೈತರು ಅವೈಜ್ಞಾನಿಕ ಕೃಷಿ ಪದ್ಧತಿಗಳಿಂದ ಹೊರಬಂದು ವೈಜ್ಞಾನಿಕ ಹಾಗೂ ಆಧುನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕೃಷಿ ಮಹಾವಿದ್ಯಾಲಯದ ಡೀನ್ ಡಾ. ಬಿ.ಎಂ. ದೊಡ್ಡಮನಿ ಮಾತನಾಡಿ, ಕೃಷಿ ವಿದ್ಯಾರ್ಥಿಗಳಿಗೆ ತರಗತಿಯ ಪಠ್ಯ ಜ್ಞಾನದ ಜೊತೆಗೆ ಗ್ರಾಮೀಣ ಪ್ರದೇಶದ ನೈಜ ಪರಿಸ್ಥಿತಿ ಹಾಗೂ ರೈತರು ಎದುರಿಸುತ್ತಿರುವ ಸಮಸ್ಯೆಗಳ ಪ್ರಾಯೋಗಿಕ ಅರಿವು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರವು ಉತ್ತಮ ವೇದಿಕೆಯಾಗಿದೆ ಎಂದರು.

ವಿದ್ಯಾರ್ಥಿಗಳು ಗ್ರಾಮದಲ್ಲಿ ವಾಸ್ತವ್ಯ ಹೂಡಿ ರೈತರೊಂದಿಗೆ ಬೆರೆತು ಅವರ ಸಮಸ್ಯೆಗಳನ್ನು ಆಲಿಸುವುದರ ಜೊತೆಗೆ ಆಧುನಿಕ ಕೃಷಿ ತಂತ್ರಜ್ಞಾನ, ಸಸ್ಯ ಜ್ಞಾನ ಹಾಗೂ ವೈಜ್ಞಾನಿಕ ಕೃಷಿ ಪದ್ಧತಿಗಳ ಕುರಿತು ಅರಿವು ಮೂಡಿಸಬೇಕು. ವಿದ್ಯಾರ್ಥಿಗಳು ರೈತರು ಹಾಗೂ ಕೃಷಿ ವಿಜ್ಞಾನದ ನಡುವೆ ಸೇತುವೆಯಾಗಿ ಕಾರ್ಯ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಶಿಬಿರದ ಸಂದರ್ಭದಲ್ಲಿ ಮಣ್ಣಿನ ಪರೀಕ್ಷೆ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ, ಸಮಗ್ರ ಕೀಟ ಮತ್ತು ಸಸ್ಯ ರೋಗ ನಿರ್ವಹಣೆ ಹಾಗೂ ಕೃಷಿ ಆರ್ಥಿಕತೆಯ ಸುಧಾರಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ರೈತರೊಂದಿಗೆ ಕಾರ್ಯನಿರ್ವಹಿಸಲು ವಿದ್ಯಾರ್ಥಿಗಳು ಮುಂದಾಗಲಿದ್ದಾರೆ ಎಂದು ಪ್ರಾಧ್ಯಾಪಕರು ತಿಳಿಸಿದರು.

ಶಿಬಿರಾರ್ಥಿ ವಿದ್ಯಾರ್ಥಿಗಳು ಮಾತನಾಡಿ, ಮುಂದಿನ ದಿನಗಳಲ್ಲಿ ಗ್ರಾಮದ ಪ್ರತಿ ಕೃಷಿ ಕುಟುಂಬದೊಂದಿಗೆ ಬೆರೆತು, ಅವರ ಕೃಷಿ ಸಮಸ್ಯೆಗಳನ್ನು ಆಲಿಸಿ, ಅಗತ್ಯಕ್ಕೆ ತಕ್ಕಂತೆ ಕೃಷಿ ವಿಸ್ತರಣಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ ಸಿಬ್ಬಂದಿಗಳಾದ ಡಾ. ಸಂಜೀವ ಬೆಲ್ಲದ, ಡಾ. ಸಿದ್ದರಾಮು ಯಾಳವಾರ ಹಾಗೂ ಡಾ. ಮಹಾಂತೇಶ ಜೋಗಿ ಅವರು ತೋಟಗಾರಿಕೆ ಬೆಳೆಗಳ ಮಹತ್ವದ ಕುರಿತು ಮಾತನಾಡಿದರು.

ಭೈರಾಮಡಗಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಈರಣ್ಣ ಬಿರಾದಾರ, ಶಿವಾನಂದ ಪೊಲೀಸ್ ಪಾಟೀಲ್ ಸೇರಿದಂತೆ ಗ್ರಾಮದ ನೂರಾರು ರೈತರು ಉಪಸ್ಥಿತರಿದ್ದರು. ವಿದ್ಯಾರ್ಥಿ ಅಭಿಷೇಕ್ ಕುಲಕರ್ಣಿ ನಿರೂಪಿಸಿದರು. ಭಾಗ್ಯಲಕ್ಷ್ಮಿ ಸ್ವಾಗತಿಸಿ ದರು. ಡಿ. ನವೀನ್ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾವೇರಿ ವಂದಿಸಿದರು.

# ಸೇವಾ ಮನೋಭಾವ ಬೆಳೆಸುವಲ್ಲಿ ಎನ್‌ಎಸ್‌ಎಸ್ ಶಿಬಿರಗಳ ಪಾತ್ರ ಮಹತ್ವದ್ದು

ರ್ಜುನ ದೇಸಾಯಿ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಮಾಜಮುಖಿ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಗಿರಿಮಲ್ಲಪ್ಪ ಕರಡಕಲ್, ಕಾರ್ಯದರ್ಶಿಗಳು, ಶಿಕ್ಷಣ ಮಹಾವಿದ್ಯಾಲಯ, ರಾಯಚೂರು ಅವರು ಮಾತನಾಡಿ, ಎನ್‌ಎಸ್‌ಎಸ್ ಶಿಬಿರದ ಮೂಲಕ ವಿದ್ಯಾರ್ಥಿಗಳಿಗೆ ಗ್ರಾಮೀಣ ಜೀವನ, ಸಾಮಾಜಿಕ ಸಮಸ್ಯೆಗಳು ಹಾಗೂ ಜನರೊಂದಿಗೆ ಬೆರೆಯುವ ಅನುಭವ ದೊರೆಯುತ್ತದೆ ಎಂದರು.

ಆರ್. ವಿರೇಂದ್ರ ಪಾಟೀಲ್, ಸದಸ್ಯರು, ಶಿಕ್ಷಣ ಮಹಾವಿದ್ಯಾಲಯ, ರಾಯಚೂರು ಅವರು ಮಾತನಾಡಿ, ಸೇವಾ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳು ಉತ್ತಮ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ಕರೆ ನೀಡಿದರು.

ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಂಜುನಾಥ ಪಾಟೀಲ ವಟಗಲ್ ಮಾತನಾಡಿ, ವಾರ್ಷಿಕ ವಿಶೇಷ ಶಿಬಿರವು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವವನ್ನು ಬೆಳೆಸುವುದರ ಜೊತೆಗೆ ಗ್ರಾಮೀಣ ಪ್ರದೇಶದ ಸಮಸ್ಯೆಗಳನ್ನು ಅರಿತುಕೊಳ್ಳಲು ಉತ್ತಮ ವೇದಿಕೆಯಾಗಿದೆ ಎಂದು ತಿಳಿಸಿದರು.

ಶಿಬಿರದ ಸಂಯೋಜಕರಾದ ಡಾ. ಸಿದ್ದರಾಮಯ್ಯ ಹಿರೇಮಠ ಅವರು ಶಿಬಿರದಲ್ಲಿ ನಡೆದ ವಿವಿಧ ಕಾರ್ಯಕ್ರಮಗಳು, ವಿದ್ಯಾರ್ಥಿಗಳ ಭಾಗವಹಿಸುವಿಕೆ ಹಾಗೂ ಶಿಬಿರದ ಉದ್ದೇಶಗಳ ಕುರಿತು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಉಪಾಧ್ಯಕ್ಷರು ಹಾಗೂ ಶಿಕ್ಷಣ ಮಹಾವಿದ್ಯಾಲಯದ ಅಧ್ಯಕ್ಷರಾದ ಅಶೋಕ್ ಪಾಟೀಲ್ ಅತ್ತನೂರು ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಮೂಲ ಉದ್ದೇಶವಾದ ಸೇವೆಯ ಮೂಲಕ ವ್ಯಕ್ತಿತ್ವ ವಿಕಸನವನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಎಲ್‌ಡಿ ಪಬ್ಲಿಕ್ ಶಾಲೆ, ಗಬ್ಬೂರಿನ ಎಲ್ಲಾ ಪದಾಧಿಕಾರಿಗಳ ವತಿಯಿಂದ ಶಿಕ್ಷಣ ಮಹಾವಿದ್ಯಾಲಯದ ಪದಾಧಿಕಾರಿಗಳು ಹಾಗೂ ಉಪನ್ಯಾಸಕರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿಗಳಾದ ಶಶಿಕುಮಾ,ರ್ ಉಪನ್ಯಾಸಕರಾದ ವೀರನಗೌಡ ಹೇಮರೆಡ್ಡಿ, ಉತ್ತಪ್ಪ, ಶರಣಮ್ಮ, ಹಂಪಮ್ಮ, ಮಾಧುರಿ, ಪ್ರವೀಣ ಕುಮಾ,ರ್ ಈರಪ್ಪ ಸರ್ಜಾಪುರ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಸಿಂದೊಳ್ಳು ಅಲೆಮಾರಿ ಜನಾಂಗಕ್ಕೆ ನಿವೇಶನಕ್ಕೆ ಆಗ್ರಹ

ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಯುವಕರು ತಮ್ಮಲ್ಲಿರುವ ಪ್ರತಿಭೆ ಮತ್ತು ಸಾಮರ್ಥ್ಯವನ್ನು ಗುರುತಿಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ಅವಕಾಶಗಳನ್ನು ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಶ್ರೀ ಮಲ್ಲಿಕಾರ್ಜುನ ದೇಸಾಯಿ, ಎಸ್.ಎಲ್.ಡಿ. ಪಬ್ಲಿಕ್ ಶಾಲೆ, ಗಬ್ಬೂರು, ಮಾತನಾಡಿ, ಯುವಜನರಲ್ಲಿ ಕೌಶಲ್ಯಾಭಿವೃದ್ಧಿ, ಸ್ವಾವಲಂಬನೆ ಹಾಗೂ ಉದ್ಯೋಗ ಸೃಷ್ಟಿಯ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಮಂಜುನಾಥ ಪಾಟೀಲ ವಟಗಲ, ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸಾಮಾಜಿಕ ಜವಾಬ್ದಾರಿ, ನಾಯಕತ್ವ ಗುಣ ಹಾಗೂ ಸ್ವಾವಲಂಬನೆಯ ಮನೋಭಾವವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಬಂಡಿ ವಿರುಪನಗೌಡ, ಪ್ರಧಾನ ಕಾರ್ಯದರ್ಶಿಗಳು, ಜಿಲ್ಲಾ ವೀರಶೈವ ಲಿಂಗಾಯತ ಸಮಾಜ, ರಾಯಚೂರು, ಮಾತನಾಡಿ, ಯುವಜನರು ದೇಶದ ಅಮೂಲ್ಯ ಸಂಪತ್ತಾಗಿದ್ದು, ಅವರ ಶಕ್ತಿ ಮತ್ತು ಪ್ರತಿಭೆಯನ್ನು ರಾಷ್ಟ್ರ ನಿರ್ಮಾಣದ ಕಾರ್ಯದಲ್ಲಿ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಸಂಯೋಜಕರಾದ ಡಾ. ಸಿದ್ದರಾಮಯ್ಯ ಹಿರೇಮಠ, ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕದ ಕಾರ್ಯಕ್ರಮಾಧಿಕಾರಿಗಳಾದ ಶ್ರೀ ಶಶಿಕುಮಾರ, ಉಪನ್ಯಾಸಕರಾದ ಶ್ರೀ ವೀರನಗೌಡ, ಹೇಮರೆಡ್ಡಿ, ಉತ್ತಪ್ಪ, ಶ್ರೀಮತಿ ಶರಣಮ್ಮ, ಈರಪ್ಪ ಸರ್ಜಾಪುರ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ನಿಮ್ಮೂರು ಸುದ್ದಿ

## ಸಂಪಾದಕೀಯ




# ಪ್ರಬುದ್ಧತೆಯತ್ತ ರಾಹುಲ್ ಪಥಭ್ರಾಂತದತ್ತ ಮೋದಿ

ದೇಶದ ಇತ್ತೀಚಿನ ರಾಜಕೀಯ ಬೆಳವಣಿಗೆಗಳು, ಕಳೆಗಟ್ಟುತ್ತಿರುವ ಜೆನ್-ಝಿ ಹೋರಾಟ, ಕೇಂದ್ರ ಸರ್ಕಾರದ ಆಡಳಿತಾತ್ಮಕ ವೈಫಲ್ಯಗಳು, ಕುಗ್ಗುತ್ತಿರುವ ಮೋದಿಯವರ ವರ್ಚಸ್ಸು ... ಇದಕ್ಕೆ ಪೂರಕವಾಗಿ ದೇವೇಗೌಡರ ಪ್ರಬುದ್ಧತೆಯತ್ತ ರಾಹುಲ್ ಹೇಳಿಕೆ... ಗಮನಾರ್ಹವಾದುದು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅಪ್ರಬುದ್ಧರಲ್ಲ, ಅನುಭವದ ಕೊರತೆ ಇದೆ ಎಂದು ಹೇಳಲಾರೆ, ರಾಜಕೀಯದಲ್ಲಿ ವೇಗವಾಗಿ ಮುನ್ನಡೆಯಬೇಕೆಂಬ ಮನಸ್ಸಿದೆ ಎಂದಿದ್ದಾರೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ.

ಎಸ್. ನಿಜಲಿಂಗಪ್ಪನವರ ಕಾಲದಿಂದ ದೇಶದ ರಾಜಕಾರಣವನ್ನು ಕಂಡಿರುವ, ದೇಶದ ಪ್ರಧಾನಿ ಪಟ್ಟದಲ್ಲಿ ಕೂತು ಕೆಳಗಿಳಿದಿರುವ, 93ನೇ ವಯಸ್ಸಿನಲ್ಲಿಯೂ ರಾಜಕಾರಣದಲ್ಲಿ ಸಕ್ರಿಯರಾಗಿರುವ ಗೌಡರ ಈ ಮಾತು ಈ ಕ್ಷಣಕ್ಕೆ ಬಹಳ ಮುಖ್ಯವೆನಿಸುತ್ತಿದೆ.

ಹಾಗಂತ ಗೌಡರು ಕಾಂಗ್ರೆಸ್ ಪರ ಒಲವು ಹೊಂದಿದ್ದಾರೆ, ಬಿಜೆಪಿಯೊಂದಿಗಿನ ಮೈತ್ರಿ ಮುರಿದುಕೊಳ್ಳುತ್ತಿದ್ದಾರೆ ಎಂಬ ತೀರ್ಮಾನಕ್ಕೆ ಬರುವಂತಿಲ್ಲ. ವಯೋಸಹಜ ಮಾತು ಆಗಿರಬಹುದೇ ಎಂದರೆ, ಡಯಾಲಿಸಿಸ್ ದೇಹಕ್ಕೆ ಹೊರತು, ನನ್ನ ನೆನಪಿನ ಶಕ್ತಿಗಲ್ಲ, ಬ್ರೈನ್ ಡಯಾಲಿಸಿಸ್ ಶುರುವಾಗಿಲ್ಲ ಎನ್ನುವ ಎಚ್ಚರಿಕೆಯ ಮಾತನ್ನೂ ಮರೆಯುವಂತಿಲ್ಲ.

ಸೋಜಿಗದ ಸಂಗತಿ ಎಂದರೆ, ಇದೇ ಗೌಡರು, 2024ರ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಕಾಂಗ್ರೆಸ್ ಪ್ರಣಾಳಿಕೆ ಹಾಗೂ ಸಂಪತ್ತು ಮರುಹಂಚಿಕೆ ಕುರಿತಾದ ರಾಹುಲ್ ಗಾಂಧಿಯವರ ಪ್ರಸ್ತಾಪಗಳನ್ನು ತೀವ್ರವಾಗಿ ಟೀಕಿಸಿದ್ದರು. ''ರಾಹುಲ್ ಗಾಂಧಿ ಅವರ ಇಂತಹ ಅಪ್ರಬುದ್ಧ ಆರ್ಥಿಕ ಆಲೋಚನೆಗಳನ್ನು ಅವರ ಪಕ್ಷದ ಹಿರಿಯ ನಾಯಕ ಪಿ. ಚಿದಂಬರಂ ಹೇಗೆ ಒಪ್ಪುತ್ತಾರೋ?'' ಎಂದು ಪ್ರಶ್ನಿಸಿದ್ದರು. 2018ರ ಕರ್ನಾಟಕ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ರಾಹುಲ್ ಗಾಂಧಿ ಅವರು ಜೆಡಿಎಸ್ ಪಕ್ಷವನ್ನು ಬಿಜೆಪಿಯ ಬಿ-ಟೀಮ್ ಎಂದು ಕರೆದಾಗ, ಗೌಡರು ಗರಂ ಆಗಿ, ''ರಾಹುಲ್ ಗಾಂಧಿ ಅವರಿಗೆ ಇತಿಹಾಸದ ತಿಳಿವಳಿಕೆಯ ಕೊರತೆಯಿದೆ, ಅವರ ಹೇಳಿಕೆಗಳು ಅಪ್ರಬುದ್ಧತೆಯಿಂದ ಕೂಡಿವೆ'' ಎಂದು ಕುಟುಕಿದ್ದರು.

ಇಂತಹ ಗೌಡರು ಈಗ ರಾಹುಲ್ ಗಾಂಧಿಯವರಲ್ಲಿ ಪ್ರಬುದ್ಧತೆಯನ್ನು ಗುರುತಿಸುತ್ತಿದ್ದಾರೆ. ಈ ಹೇಳಿಕೆಯ ಹಿಂದೆ, ದೇಶದ ಇತ್ತೀಚಿನ ರಾಜಕೀಯ ಬೆಳವಣಿಗೆಗಳು, ಕಳೆಗಟ್ಟುತ್ತಿರುವ ಜೆನ್-ಝಿ ಹೋರಾಟ, ಕೇಂದ್ರ ಸರ್ಕಾರದ ಆಡಳಿತಾತ್ಮಕ ವೈಫಲ್ಯಗಳು, ಕುಗ್ಗುತ್ತಿರುವ ಮೋದಿಯವರ ವರ್ಚಸ್ಸು ತಳುಕು ಹಾಕಿಕೊಂಡಿರಬಹುದು. ಇದಕ್ಕೆ ಪೂರಕವಾಗಿ ರಾಹುಲ್ ಗಾಂಧಿಯವರ ಇತ್ತೀಚಿನ ನಡೆ-ನುಡಿಗಳೂ ಕಾರಣವಾಗಿರಬಹುದು.

ಸದ್ಯ ದೇಶದ ರಾಜಕಾರಣದಲ್ಲಿ ಚುನಾವಣಾ ಆಯೋಗ ಮತ್ತು ಮತದಾರರ ಪಟ್ಟಿ ಪರಿಷ್ಕರಣೆ ಪ್ರಮುಖ ವಿಷಯವಾಗಿದೆ. ಇದನ್ನು ಸವಾಲಿನಂತೆ ಸ್ವೀಕರಿಸಿರುವ ರಾಹುಲ್ ಗಾಂಧಿ, ಆಯೋಗದ ಮತ ಕಳವು ಕೃತ್ಯವನ್ನು ದೇಶದ ಮುಂದಿಡುತ್ತಿರುವುದು, ಜನ ಅವರತ್ತ ತಿರುಗಿ ನೋಡುವಂತೆ ಮಾಡಿದೆ.

ಆ ನಿಟ್ಟಿನಲ್ಲಿ ಅಕ್ಟೋಬರ್ 6ರಂದು ಇಂಡಿಯಾ ಮೈತ್ರಿಕೂಟದ ಸಂಸದರು ಚುನಾವಣಾ ಆಯೋಗದ ವಿರುದ್ಧ ನಡೆಸಿದ ಪ್ರತಿಭಟನೆಯಲ್ಲಿ ರಾಹುಲ್ ಮುಂಚೂಣಿಯಲ್ಲಿದ್ದರು. ಪ್ರತಿಭಟನಾಕಾರರನ್ನು ಪೊಲೀಸರು ತಡೆದಾಗ ಬ್ಯಾರಿಕೇಡ್ ಏರಿ ನಿಂತ ದೃಶ್ಯ- ಹಲವರಲ್ಲಿ ಹಲವು ರೀತಿಯ ತರಂಗಗಳನ್ನು ಸೃಷ್ಟಿಸಿದೆ.

ಅದು ಕೇವಲ ಒಂದು ಪ್ರತಿಭಟನೆಯ ಚಿತ್ರವಲ್ಲ. ರಾಹುಲ್ ಗಾಂಧಿ ತಮ್ಮನ್ನು ಸಂಸತ್ತಿನ ಒಳಗಿನ ಪ್ರತಿಪಕ್ಷ ನಾಯಕನಿಂದ, ಬೀದಿ ಮೇಲಿನ ಪ್ರತಿರೋಧದ ನಾಯಕನಾಗಿಯೂ ರೂಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ ಎಂಬ ರಾಜಕೀಯ ಸಂದೇಶವನ್ನು ರವಾನಿಸಿದ ಚಿತ್ರ.

ಅದೊಂದೇ ಅಲ್ಲ, ಅಕ್ಟೋಬರ್ 4ರಂದು ಅವರು ಸತ್ಯಾಗ್ರಹ ಎಂಬ ಡಿಜಿಟಲ್ ವೇದಿಕೆಯನ್ನು ಆರಂಭಿಸಿದರು. ವಿದ್ಯಾರ್ಥಿಗಳು, ರೈತರು, ಆದಿವಾಸಿಗಳು, ದಲಿತರು, ಮಹಿಳೆಯರು- ದನಿ ಇಲ್ಲದವರಿಗೆ ಪ್ರಭುತ್ವವನ್ನು ಪ್ರಶ್ನಿಸುವ ವೇದಿಕೆಯೊದಗಿಸಿಕೊಟ್ಟರು. ಅವರನ್ನೆಲ್ಲ ಒಂದೇ ವೇದಿಕೆಯಡಿ ತಂದು ಅವರಲ್ಲಿ ಧೈರ್ಯ ತುಂಬಿದರು.

ಅದಕ್ಕೂ ಹಿಂದೆ ಛಾತ್ರೋಂನ್ ಕಿ ಗೂಂಜ್ ಕಾರ್ಯಕ್ರಮಗಳ ಮೂಲಕ ರಾಹುಲ್ ಗಾಂಧಿಯವರು ವಿದ್ಯಾರ್ಥಿಗಳೊಂದಿಗೆ ನೇರ ಸಂವಾದಕ್ಕಿಳಿದಿದ್ದರು. ಆ ಕಾರ್ಯಕ್ರಮಗಳ ಮೂಲಕ ಲಕ್ಷಾಂತರ ಯುವಜನರೊಂದಿಗೆ ನೇರವಾಗಿ ಸಂವಾದಿಸಿದರು, ಅವರ ಒಲವು ಸಂಪಾದಿಸಿದರು.

ಹೀಗೆ ಸಂವಿಧಾನ, ಪ್ರಜಾಪ್ರಭುತ್ವ, ಚುನಾವಣಾ ಆಯೋಗ, ಮತ ಕಳವು ಮುಂತಾದ ಪ್ರಶ್ನೆಗಳನ್ನು ನಿರಂತರವಾಗಿ ಮುಂದಿಡುತಲೇ, ತಮ್ಮ ರಾಜಕೀಯ ಬದುಕಿಗೆ ಸ್ಪಷ್ಟವಾದ ವಿಷಯಾಧಾರಿತ ಖಚಿತತೆ ನೀಡುತ್ತಿದ್ದಾರೆ. ಹಾಗೆಯೇ ಬೀದಿ ಹೋರಾಟ, ಸಂಸತ್ತಿನ ಪ್ರತಿರೋಧ, ಯುವಜನರೊಂದಿಗಿನ ಸಂವಾದ, ಅಂಚಿನ ಜನರನ್ನು ಅಪ್ಪಿಕೊಳ್ಳುವುದು, ಅನ್ಯಾಯ ಕಂಡಾಕ್ಷಣ ಖಂಡಿಸುವುದನ್ನು ರಾಹುಲ್ ರಾಜಕೀಯದ ಪ್ರಮುಖ ಸಾಧನಗಳನ್ನಾಗಿ ಮಾಡಿಕೊಂಡಿದ್ದಾರೆ.

ಆದರೆ ಸಂಘಪರಿವಾರ, ಬಿಜೆಪಿ ಮತ್ತು ಭಕ್ತರು ಈಗಲೂ ರಾಹುಲ್ ಅವರನ್ನು ಗೇಲಿಯ ವಸ್ತುವನ್ನಾಗಿಯೇ ನೋಡುತ್ತಿದ್ದಾರೆ. ಆದರೆ, ಅವರೆಷ್ಟೇ ಗೇಲಿ ಮಾಡಿದರೂ, ರಾಹುಲ್ ಕುಗ್ಗುತ್ತಿಲ್ಲ. ಒಂದಿನಿತೂ ಹೆದರುತ್ತಿಲ್ಲ. ತಮಗನಿಸಿದ್ದನ್ನು ನೇರವಾಗಿ ಹೇಳುತ್ತಾ ಬರುತ್ತಿದ್ದಾರೆ. ಅಂಬಾನಿ-ಅದಾನಿ-ಮೋದಿ ಸಂಬಂಧವನ್ನು ಬಯಲು ಮಾಡುತ್ತಿದ್ದಾರೆ. ಮಾಧ್ಯಮಗಳ ಪಕ್ಷಪಾತ ನೀತಿಯನ್ನು ಪತ್ರಕರ್ತರ ಸಮ್ಮುಖದಲ್ಲಿಯೇ ಖಂಡಿಸುತ್ತಿದ್ದಾರೆ.

ಅಸಲಿಗೆ ರಾಹುಲ್ ಗಾಂಧಿಯವರನ್ನು ಇಷ್ಟೊಂದು ನೇರ, ನಿಷ್ಠುರ, ಪ್ರಖರ ಮತ್ತು ಧೈರ್ಯವಂತ ವ್ಯಕ್ತಿಯನ್ನಾಗಿ ಮಾರ್ಪಡಿಸಿದ್ದು ಬಿಜೆಪಿಯೇ. ನಿರಂತರ ದಾಳಿ, ವ್ಯಂಗ್ಯ, ಕುಚೇಷ್ಟೆ, ಅಪಮಾನ, ನಿಂದನೆ ಮಾಡುವುದರಿಂದ ರಾಹುಲ್‌ರನ್ನು ಹೊಸಕಿ ಹಾಕಬಹುದು ಎಂದು ಬಿಜೆಪಿ ಭಾವಿಸಿತ್ತು. ಅದಕ್ಕಾಗಿ ಕೋಟ್ಯಂತರ ರೂಪಾಯಿ ಸುರಿದು ಐಟಿ ಸೆಲ್ ಸ್ಥಾಪಿಸಿ, ಸುಳ್ಳು ಸೃಷ್ಟಿಸಿ, ಬಿತ್ತರಿಸಿ ರಾಹುಲ್ ರನ್ನು ಹಣಿಯುವುದನ್ನೇ ಪೂರ್ಣಕಾಲಿಕ ಉದ್ಯೋಗವನ್ನಾಗಿಸಿಕೊಂಡಿತು. ಅಷ್ಟೇ ಅಲ್ಲ, ರಾಹುಲ್ ವಿರುದ್ಧ ದೇಶಾದ್ಯಂತ ಹತ್ತಾರು ಕೇಸುಗಳು ದಾಖಲಾಗುವಂತೆ ನೋಡಿಕೊಂಡಿತು. ಪಾರ್ಲಿಮೆಂಟಿನಿಂದಲೂ ಹೊರಹಾಕಿ ಕೆಟ್ಟ ಇತಿಹಾಸ ಸೃಷ್ಟಿಸಿತ್ತು.

ಇದಕ್ಕೆ ವ್ಯತಿರಿಕ್ತವಾಗಿ, ಪ್ರಧಾನಿಯಾಗಿರುವ ಮೋದಿಯವರಾದರೂ ಉತ್ತಮ ಆಡಳಿತ, ದೇಶದ ಅಭಿವೃದ್ಧಿ, ಜನರ ಜೀವನ ಮಟ್ಟ ಸುಧಾರಿಸಿದ್ದಾರ? ಕಳೆದ ಹನ್ನೆರಡು ವರ್ಷಗಳಲ್ಲಿ ಮೋದಿ-ಅಮಿತ್ ಶಾ ಅವರ ಕುತಂತ್ರಗಳದ್ದೇ ಕಾರುಬಾರು. ಅದೇ ಆಡಳಿತವಾಗಿದೆ, ಕಾನೂನಾಗಿದೆ. ಅಪರಿಮಿತ ಅಧಿಕಾರ ಬಲದಿಂದ ರಾಹುಲ್ ಮತ್ತು ಕಾಂಗ್ರೆಸ್ ಪಕ್ಷದ ಮೇಲೆ ನಿರಂತರ ದಾಳಿ ಮಾಡುತ್ತಿದೆ. ವಿರೋಧ ಪಕ್ಷಗಳೇ ಇಲ್ಲದಂತೆ ಮಾಡಿ ಸರ್ವಾಧಿಕಾರಿಯಂತೆ ಮೆರೆಯುತ್ತಿದ್ದಾರೆ.

ಎಲ್ಲದಕ್ಕೂ ಒಂದು ಮಿತಿ ಎಂಬುದಿದೆಯಲ್ಲವೇ? ಪರಿಸ್ಥಿತಿ ಈಗ ಬದಲಾಗಿದೆ. ರಾಹುಲ್ ಮಾಡಿದ ಎರಡು ಭಾರತ್ ಜೋಡೋ ಯಾತ್ರೆಗಳು ಅವರ ಮನೋಬಲವನ್ನು ಇಮ್ಮಡಿಗೊಳಿಸಿವೆ. ವಿದ್ಯಾರ್ಥಿ-ಯುವಸಮೂಹದ ಬೆನ್ನಿಗೆ ನಿಂತು ಬೆಂಬಲಿಸುತ್ತಿರುವುದು, ಎಸ್‌ಐಆರ್ ಕುರಿತು ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಒತ್ತಾಯಿಸುತ್ತಿರುವುದು- ಪ್ರಧಾನಿ ಮೋದಿಯವರ ಮುಖವಾಡವನ್ನು ಕಳಚಿಡುತ್ತಿದೆ. ರಾಹುಲ್ ಅವರ ನೇರ, ನಿಷ್ಠುರ ಮಾತು-ವರ್ತನೆಗಳು ಜನರನ್ನು ಪ್ರಭಾವಿಸತೊಡಗಿವೆ.

ಅಮೆರಿಕಾದ ಪ್ರಮುಖ ಕಾರ್ಮಿಕ ಮುಖಂಡ ನಿಕೋಲಸ್ ಕ್ಲೈನ್, ಮೊದಲು ಅವರು ನಿಮ್ಮನ್ನು ನಿರ್ಲಕ್ಷಿಸುತ್ತಾರೆ, ನಂತರ ಅವರು ನಿಮ್ಮನ್ನು ನೋಡಿ ನಗುತ್ತಾರೆ, ನಂತರ ಅವರು ನಿಮ್ಮೊಂದಿಗೆ ಹೋರಾಡುತ್ತಾರೆ, ತದನಂತರ ನೀವು ಗೆಲ್ಲುತ್ತೀರಿ ಎನ್ನುವ ಸುಪ್ರಸಿದ್ಧ ವ್ಯಾಖ್ಯಾನದಂತೆ, ಪಪ್ಪು ಎಂದು ಆಡಿಕೊಂಡು ನಗಾಡಿದ್ದ ಪ್ರಧಾನಿ ಮೋದಿಯವರೇ ಇಂದು ಅದೇ ರಾಹುಲ್ ಗಾಂಧಿಯ ಪ್ರತಿ ನಡೆಯನ್ನೂ ಅನುಕರಿಸಲು ಹಾತೊರೆಯುತ್ತಿದ್ದಾರೆ.

ದಿನದಿಂದ ದಿನಕ್ಕೆ ರಾಹುಲ್ ಗಾಂಧಿ ಜನ ಮನದಲ್ಲಿ ಜಾಗ ಪಡೆದು ಪ್ರಬುದ್ಧರಾಗುತ್ತಿದ್ದರೆ, ಮೋದಿಯವರು ಕೆಟ್ಟ ಆಡಳಿತದಿಂದ ನಿಧಾನವಾಗಿ ಜನ ಮನದಿಂದ ಮರೆಯಾಗುತ್ತಿದ್ದಾರೆ. ಇಲ್ಲಿ ಯಾರೂ ಮುಖ್ಯರಲ್ಲ, ಯಾರೂ ಅಮುಖ್ಯರಲ್ಲ ಎನ್ನುವ ಕವಿವಾಣಿ ಮತ್ತೆ ಮತ್ತೆ ಸಾಬೀತಾಗುತ್ತಲೇ ಇದೆ.

# ಬಿಡಿಗಾಸು ಬರ ಪರಿಹಾರ! ಹಿಂಗಾರು ಬಿತ್ತನೆಗೆ ಸಾಲದ ಮೊರೆ ಹೋದ ಬೆಳಗಾವಿ ರೈತರು

ಮುಂಗಾರು ಮಳೆ ಕೈಕೊಟ್ಟು ಬೆಳೆ ನಷ್ಟ ಅನುಭವಿಸಿರುವ ಬೆಳಗಾವಿಯ ರೈತರು ಇದೀಗ ಹಿಂಗಾರು ಬಿತ್ತನೆಯ ಸಿದ್ಧತೆಯಲ್ಲಿದ್ದಾರೆ. ಆದರೆ ಕೈಯಲ್ಲಿ ಹಣವಿಲ್ಲದ ಕಾರಣ ಬಿತ್ತನೆಗೆ ಅಗತ್ಯವಾದ ಬೀಜ, ಗೊಬ್ಬರ, ಔಷಧಿ ಸೇರಿದಂತೆ ಕೃಷಿ ಪರಿಕರಗಳನ್ನು ಖರೀದಿಸಲು ಮತ್ತೆ ಸಾಲದ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ರಾಜ್ಯದಲ್ಲಿ ಮಳೆ ಕೊರತೆಯಿಂದ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಬೆಳಗಾವಿ ಜಿಲ್ಲೆಯ 15 ತಾಲೂಕುಗಳ ಪೈಕಿ 13 ತಾಲೂಕುಗಳು ಬರಪೀಡಿತ ಪಟ್ಟಿಯಲ್ಲಿವೆ. ಜಿಲ್ಲೆಯ ಹಲವೆಡೆ ಮಳೆ ಕೊರತೆಯಿಂದ ಬೆಳೆ ಒಣಗಿ ರೈತರು ನಷ್ಟ ಅನುಭವಿಸಿದ್ದಾರೆ.

ಬೆಳೆ ಕಳೆದುಕೊಂಡ ರೈತರಿಗೆ ರಾಜ್ಯ ಸರ್ಕಾರ ಮೊದಲ ಹಂತದಲ್ಲಿ ಪ್ರತಿ ರೈತರಿಗೆ ₹2,500 ಬರ ಪರಿಹಾರ ನೀಡುವುದಾಗಿ ಘೋಷಿಸಿದೆ. ಆದರೆ ಪರಿಹಾರದ ಹಣ ಇನ್ನೂ ರೈತರ ಖಾತೆಗಳಿಗೆ ಜಮೆಯಾಗಿಲ್ಲ ಎಂಬುದು ರೈತರ ಅಳಲು. ಒಂದೆಡೆ ಬೆಳೆ ನಷ್ಟ, ಮತ್ತೊಂದೆಡೆ ಹಿಂಗಾರು ಬಿತ್ತನೆಗೆ ಬೇಕಾದ ಹಣದ ಕೊರತೆ ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸಿದೆ.

ಬಿತ್ತನೆಗೆ ಹಣವಿಲ್ಲದೆ ರೈತರ ಪರದಾಟ:

ಮುಂಗಾರು ಹಂಗಾಮಿನಲ್ಲಿ ಬಿತ್ತನೆಗಾಗಿ ಸಾವಿರಾರು ರೂಪಾಯಿ ಖರ್ಚು ಮಾಡಿದ್ದ ರೈತರಿಗೆ ಮಳೆ ಕೈಕೊಟ್ಟ ಪರಿಣಾಮ ಆ ಹಣವೂ ವಾಪಸ್ ಬಂದಿಲ್ಲ. ಈಗ ಹಿಂಗಾರು ಬಿತ್ತನೆ ಆರಂಭವಾಗಿದ್ದು, ಮತ್ತೊಮ್ಮೆ ಹೊಲಕ್ಕೆ ಹಣ ಹಾಕಬೇಕಾಗಿದೆ.

ಬೀಜ, ರಸಗೊಬ್ಬರ, ಕೀಟನಾಶಕ, ಉಳುಮೆ ಹಾಗೂ ಕೂಲಿ ಸೇರಿದಂತೆ ಹಿಂಗಾರು ಬಿತ್ತನೆಗೆ ಹಲವು ಖರ್ಚುಗಳಿವೆ. ಈಗಾಗಲೇ ಸಾಲದಲ್ಲಿರುವ ರೈತರು ಮತ್ತಷ್ಟು ಸಾಲ ಮಾಡಿಯೇ ಬಿತ್ತನೆ ಮಾಡಬೇಕಾದ ಅನಿವಾರ್ಯತೆಗೆ ಸಿಲುಕಿದ್ದಾರೆ.

ಸರ್ಕಾರ ಘೋಷಿಸಿರುವ ₹2,500 ಪರಿಹಾರ ಮೊತ್ತ ಕಡಿಮೆಯಾದರೂ, ಸಂಕಷ್ಟದಲ್ಲಿರುವ ರೈತರಿಗೆ ಕನಿಷ್ಠ ಆ ಹಣವಾದರೂ ಸಮಯಕ್ಕೆ ಸರಿಯಾಗಿ ಸಿಕ್ಕರೆ ಬಿತ್ತನೆಗೆ ಸ್ವಲ್ಪ ಅನುಕೂಲವಾಗಲಿದೆ. ಹೀಗಾಗಿ ಹಿಂಗಾರು ಬಿತ್ತನೆ ವಿಳಂಬವಾಗುವ ಮುನ್ನ ಪರಿಹಾರ ಹಣವನ್ನು ಖಾತೆಗೆ ಜಮಾ ಮಾಡಬೇಕು ಎಂಬುದು ರೈತರ ಒತ್ತಾಯವಾಗಿದೆ.

ಬಿಡಿಗಾಸು ಬರ ಪರಿಹಾರ!

ಬರ ಪರಿಹಾರವಾಗಿ ನೀಡುತ್ತಿರುವ ₹2,500 ಮೊತ್ತದ ಬಗ್ಗೆ



ರೈತರಿಂದ ಅಸಮಾಧಾನ ವ್ಯಕ್ತವಾಗುತ್ತಿದೆ. ಇಂದಿನ ಕೃಷಿ ವೆಚ್ಚಕ್ಕೆ ಹೋಲಿಸಿದರೆ ಈ ಮೊತ್ತ ಯಾವುದಕ್ಕೂ ಸಾಲುವುದಿಲ್ಲ. ಒಂದು ಚೀಲ ಗೊಬ್ಬರ ಖರೀದಿಗೂ ಈ ಹಣ ಸಾಕಾಗುವುದಿಲ್ಲ ಎಂದು ರೈತರು ಹೇಳುತ್ತಿದ್ದಾರೆ.

ಈ ಕುರಿತು ಈ ದಿನ.ಕಾಮ್ ಜತೆ ಮಾತನಾಡಿದ ರೈತ ಈರಣ್ಣ, ಮಳೆ ಬಾರದೆ ಬೆಳೆ ಕೈಕೊಟ್ಟಿತು. ಬಿತ್ತನೆಗೆ ಮಾಡಿದ ಖರ್ಚು ಕೂಡ ಬರಲಿಲ್ಲ. ಈಗ ಹಿಂಗಾರು ಬಿತ್ತನೆ ಮಾಡಬೇಕೆಂದರೆ ಕೈಯಲ್ಲಿ ಕಾಸಿಲ್ಲ. ಸರ್ಕಾರ ₹2,500 ಮೊದಲ ಹಂತದ ಪರಿಹಾರ ಕೊಡೋದಾಗಿ ಹೇಳಿದೆ. ಆದಷ್ಟು ಬೇಗ ನಮ್ಮ ಖಾತೆಗೆ ಹಣ ಹಾಕಲಿ ಎಂದು ಮನವಿ ಮಾಡಿದರು.

ರೈತ ಸಂಘಟನೆಯ ಮಲ್ಲಿಕಾರ್ಜುನ ಮಾತನಾಡಿ, ''₹2,500 ಯಾವುದಕ್ಕೂ ಸಾಕಾಗುವುದಿಲ್ಲ. ಒಂದು ಚೀಲ ಗೊಬ್ಬರ ತೆಗೆದುಕೊಳ್ಳೋಕೂ ಸಾಲೋದಿಲ್ಲ. ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ. ಸರ್ಕಾರ ಮೊದಲ ಹಂತದಲ್ಲೇ ಕನಿಷ್ಠ ₹10 ಸಾವಿರ ಪರಿಹಾರ ನೀಡಬೇಕು. ಬೆಳೆ ಬೆಳೆಸಲು ಸಾಲ ಮಾಡಿ ಹಣ ಹಾಕಿದ್ದಾರೆ. ಬೆಳೆ ಬಂದಿಲ್ಲ. ಈಗ ಮತ್ತೆ ಬಿತ್ತನೆ ಮಾಡಬೇಕಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ರೈತರ ಕೈ ಹಿಡಿಯಬೇಕು'' ಎಂದು ಆಗ್ರಹಿಸಿದರು.

ಈ ಕುರಿತು ರೈತ ಶಿವಾನಂದ ಮಾತನಾಡಿ, ''ರಾಜ್ಯ ಸರ್ಕಾರ ಕೇಂದ್ರಕ್ಕೆ ₹11 ಸಾವಿರ ಕೋಟಿ ಕೇಳಿದೆ ಅಂತ ಹೇಳ್ತಾರೆ. ನಮ್ಮ ಸಂಸದರು ದೆಹಲಿಗೆ ಹೋಗಿ ಕೇಂದ್ರ ಸರ್ಕಾರವನ್ನು ಕೇಳಬೇಕು. ರೈತರ ಕಷ್ಟವನ್ನು ಹೇಳಿ ಪರಿಹಾರ ತರಬೇಕು. ಸುಮ್ಮನೆ ಇರಬಾರದು'' ಎಂದರು.

ರಾಜಕಾರಣಿಗಳು ಕೇಂದ್ರ-ರಾಜ್ಯ ಅಂತ ಕಿತ್ತಾಡಿಸೋದು ಬೇಡ. ರೈತನ ಬೆಳೆ ಹೋಗಿದೆ. ಎರಡೂ ಸರ್ಕಾರ ಸೇರಿ ರೈತನನ್ನು ಉಳಿಸಬೇಕು. ನಮಗೆ ರಾಜಕೀಯ ಬೇಕಿಲ್ಲ. ಹಿಂಗಾರು ಬಿತ್ತನೆ ಮಾಡೋಕೆ ದುಡ್ಡು ಬೇಕು ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ರೈತನಿಗೆ ರಾಜಕೀಯವಲ್ಲ, ನೆರವು ಬೇಕು

ಮಳೆ ಕೊರತೆಯಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಇದೀಗ ಹಿಂಗಾರು ಹಂಗಾಮು ಮತ್ತೊಂದು ಸವಾಲಾಗಿದೆ. ಬಿತ್ತನೆ ಮಾಡದಿದ್ದರೆ ಮುಂದಿನ ಆದಾಯದ ನಿರೀಕ್ಷೆಯೂ ಇಲ್ಲ. ಬಿತ್ತನೆ ಮಾಡಬೇಕಾದರೆ ಕೈಯಲ್ಲಿ ಹಣವಿಲ್ಲ.

ಹೀಗಾಗಿ ಸರ್ಕಾರದ ಪರಿಹಾರ ವಿಳಂಬವಾದಷ್ಟೂ ರೈತರ ಸಾಲದ ಹೊರೆ ಹೆಚ್ಚಾಗುವ ಆತಂಕವಿದೆ. ಸರ್ಕಾರ ಘೋಷಿಸಿದ ಪರಿಹಾರವನ್ನು ತಕ್ಷಣ ರೈತರ ಖಾತೆಗೆ ಜಮಾ ಮಾಡುವುದರ ಜತೆಗೆ, ಹೆಚ್ಚಿನ ಪರಿಹಾರ ನೀಡುವ ಬಗ್ಗೆ ಪರಿಶೀಲನೆ ನಡೆಸಬೇಕು ಎಂಬುದು ರೈತರ ಆಶಯವಾಗಿದೆ. ಬರದಿಂದ ನಷ್ಟ ಅನುಭವಿಸಿರುವ ರೈತರಿಗೆ ಪರಿಹಾರ ಘೋಷಿಸುವುದು ಮಾತ್ರ ಸಾಕಾಗುವುದಿಲ್ಲ. ಘೋಷಿಸಿದ ಹಣ ನಿಗದಿತ ಸಮಯದಲ್ಲಿ ರೈತರ ಖಾತೆಗೆ ತಲುಪಿದಾಗ ಮಾತ್ರ ಅದರ ಉದ್ದೇಶ ಈಡೇರುತ್ತದೆ.

ಹಿಂಗಾರು ಬಿತ್ತನೆ ಆರಂಭವಾಗಿರುವ ಈ ಸಂದರ್ಭದಲ್ಲಿ ರೈತರ ಖಾತೆಗೆ ಕನಿಷ್ಠ ₹2,500 ಪರಿಹಾರವನ್ನು ತಕ್ಷಣ ಜಮಾ ಮಾಡಬೇಕು. ಜತೆಗೆ ಕೇಂದ್ರದಿಂದ ಬರ ಪರಿಹಾರ ಬಿಡುಗಡೆಗೆ ರಾಜ್ಯ ಸರ್ಕಾರ ಪರಿಣಾಮಕಾರಿ ಪ್ರಯತ್ನ ನಡೆಸಬೇಕು. ಸಂಸದರು ಕೂಡ ಕೇಂದ್ರದ ಮುಂದೆ ರೈತರ ಸಮಸ್ಯೆಯನ್ನು ಪ್ರಸ್ತಾಪಿಸಿ ಪರಿಹಾರ ತರಲು ಒತ್ತಡ ಹಾಕಬೇಕು ಎಂಬುದು ರೈತರ ಆಗ್ರಹವಾಗಿದೆ.

# ಉತ್ತರ ಕನ್ನಡದಲ್ಲಿ ಮೃತ್ಯುಕೂಪವಾಗಿರುವ ಎನ್‌ಎಚ್ -66: ವರ್ತಕರ ಆಟ ಮತ್ತು ಆರ್‌ಎಸ್‌ಎಸ್ ಕಂಪನಿ ಕಾಟ!

ಉತ್ತರ ಕನ್ನಡದ ಭಟ್ಕಳದಿಂದ ಕಾರವಾರದ ತನಕದ ಸುಮಾರು 160 ಕಿಮೀ ಚತುಷ್ಪಥ ಕಾಮಗಾರಿ ಬರೋಬ್ಬರಿ 12 ವರ್ಷದಿಂದ ತೆವಳುತ್ತಿದೆ. 65 ಮೀಟರ್ ಅಗಲದ ಹೈವೇ 45 ಮೀ.ಗೆ ಕುಗ್ಗಿದೆ. ಸಂಚಾರ ಇಕ್ಕಟ್ಟಾಗಿ 27 ಮಂದಿ ಸ್ಥಳೀಯರು ಬಲಿಯಾಗಿದ್ದಾರೆ. ಮೇಲ್ನೋಟಕ್ಕೆ ದೇಶಪಾಂಡೆ, ಅನಂತಕುಮಾರ್ ಹೆಗಡೆ ಹಾಗೂ ಕಾಗೇರಿಯವರು ಹೈವೇ ಕಾಮಗಾರಿ ಹಳ್ಳ ಹಿಡಿದಿದೆ ಎಂದು ಕೂಗಾಡುತ್ತಾರೆ. ವಾಸ್ತವವಾಗಿ ಇಡೀ ಚತುಷ್ಪಥ ಯೋಜನೆ ನರಕದಂತಾಗಲು, ಇವರೇ ಕಾರಣ ಎಂದು ಜನ ಮಾತನಾಡಿಕೊಳ್ಳುತ್ತಿದ್ದಾರೆ.

ಪಶ್ಚಿಮ ಘಟ್ಟಕ್ಕೆ ಸಮಾನಾಂತರವಾಗಿ ಪಶ್ಚಿಮ ಕರಾವಳಿಯಲ್ಲಿ ಕೇರಳದಿಂದ ಕನ್ಯಾಕುಮಾರಿ ತನಕ ಸಾಗಿರುವ ರಾಷ್ಟ್ರೀಯ ಹೆದ್ದಾರಿ 66 ಕರ್ನಾಟಕದ ಕಡಲ ತಡಿಯ ಜೀವನಾಡಿ. ಅರಬ್ಬೀ ಸಮುದ್ರದ ಅಂಚಿನಲ್ಲಿರುವ ಉತ್ತರ ಕನ್ನಡದ ಐದೂ ತಾಲೂಕುಗಳ ಜನರ ಬದುಕಿಗೆ ಆಧಾರವಾದ ಕೃಷಿ, ತೋಟಗಾರಿಕೆ, ಮೀನುಗಾರಿಕೆ ವಹಿವಾಟು, ಕುಲಕಸುಬು ಮತ್ತು ಸಾಮಾಜಿಕ, ಸಾಂಸ್ಕೃತಿಕ, ಶೈಕ್ಷಣಿಕ ಮತ್ತಿತರ ಸಕಲ ದೈನಂದಿನ ಚಟುವಟಿಕೆಗಳೊಂದಿಗೆ ಈ ಹೆದ್ದಾರಿಯದು ಕಡಿದ ಕರಳು ಬಳ್ಳಿಯ ಸಂಬಂಧ. ಕರ್ನಾಟಕ, ಬೃಹತ್ ವಾಣಿಜ್ಯ ನಗರಿ ಮುಂಬೈ-ಮಹಾರಾಷ್ಟ್ರ, ಗೋವಾ, ಕೇರಳ ಮತ್ತು ತಮಿಳುನಾಡು ನಡುವಿನ ಮಹತ್ವದ ಸಂಪರ್ಕ ಕೊಂಡಿಯಾಗಿರುವ ಈ ರಾಷ್ಟ್ರೀಯ ಹೆದ್ದಾರಿಯನ್ನು ಮೊದಲೆಲ್ಲ ಎನ್‌ಎಚ್-17, ಎನ್‌ಎಚ್-47 ಎಂದೆಲ್ಲ ಗುರುತಿಸಲಾಗುತ್ತಿತ್ತು. 1960-70ರ ದಶಕದಲ್ಲಾದ ಈ ಹೆದ್ದಾರಿ ಕಾಲಕ್ರಮೇಣ ವಾಹನಗಳ ದಟ್ಟಣೆಯಿಂದ ಕಿಕ್ಕಿರಿಯಿತು; ಅದೇ ಅನುಪಾತದಲ್ಲಿ ಅನಾಹುತ-ಅಪಘಾತಗಳೂ ಹೆಚ್ಚಾಯಿತು. ಹೆದ್ದಾರಿ ಚತುಷ್ಪಥವಾಗಿ ಅಗಲಗೊಳಿಸುವುದು ಜರೂರಾಯಿತು.

ಈ ರಸ್ತೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಎನ್‌ಎಚ್-66 ಎಂದು ನಾಮಕರಣ ಮಾಡಿ ನಾಲ್ಕು ಪಥವಾಗಿಸುವ ಕಾಮಗಾರಿ ಆರಂಭಿಸಿ ದಶಕಗಳೇ ಕಳೆದು ಹೋಗಿದೆ. ಈ ಹೈವೇ ಕಾಮಗಾರಿ ಸದ್ಯಕ್ಕಂತೂ ತಾರ್ಕಿಕ ಅಂತ್ಯ ಕಾಣುವ ಲಕ್ಷಣಗಳಿಲ್ಲ. ನ್ಯಾಷನಲ್ ಹೈವೇ ಹೀರೋ ಎಂಬ ಆರೋಪಕ್ಕೆ ಭಾಜನರಾಗಿರುವ ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿಯವರ ಸುಪರ್ದಿಯಲ್ಲಿರುವ ಹೆದ್ದಾರಿ ಪ್ರಾಧಿಕಾರದ ಪ್ರಭೃತಿಗಳ ಹೊಣೆಗೇಡಿತನದಿಂದ ಒಂದಲ್ಲ ಒಂದು ಅವಾಂತರ, ಜೀವಹಾನಿ ಎನ್‌ಎಚ್-66ರಲ್ಲಿ ನಿತ್ಯ ಕರ್ಮ ಎಂಬಂತಾಗಿಹೋಗಿದೆ!

ಉತ್ತರ ಕನ್ನಡದ ಭಟ್ಕಳದಿಂದ ಕಾರವಾರದ ತನಕದ ಸುಮಾರು 160 ಕಿಮೀ ಚತುಷ್ಪಥ ಕಾಮಗಾರಿ ಬರೋಬ್ಬರಿ 12 ವರ್ಷದಿಂದ ತೆವಳುತ್ತಿದೆ. ಕಾಮಗಾರಿ ಗುತ್ತಿಗೆ ಮುಂಬೈ ಮೂಲದ ಐಡಿಯಲ್ ರೋಡ್ ಬಿಲ್ಡರ್ಸ್(ಐಆರ್‌ಬಿ) ಎಂಬ ಪ್ರತಿಷ್ಠಿತ ರಸ್ತೆ ನಿರ್ಮಾಣ ಕಂಪನಿ ಪಡೆದುಕೊಂಡಿದೆ. ಕೇಂದ್ರ ಹೆದ್ದಾರಿ ಮಂತ್ರಿ ಗಡ್ಕರಿ ನಂಟಿನ ಕಂಪನಿ ಎನ್ನಲಾಗುವ ಐಆರ್‌ಬಿ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ನಡೆಸುತ್ತಿರುವ ಕಾಮಗಾರಿ ಶುದ್ಧ ಅವೈಜ್ಞಾನಿಕವಷ್ಟೇ ಅಲ್ಲ, ಯಾವುದೇ ತಾಂತ್ರಿಕ ತರ್ಕ-ಬದ್ಧತೆಗಳಿಲ್ಲದ ತರಲೆ-ತಾಪತ್ರಯ ಎಂದು ನುರಿತ ತಂತ್ರಜ್ಞರು-ಎಂಜಿನಿಯರ್ಗಳೇ ಅಭಿಪ್ರಾಯ ಪಡುತ್ತಾರೆ.

ಇಂತಹ ಐಆರ್‌ಬಿ ಕಾಮಗಾರಿಯಿಂದ ಉತ್ತರ ಕನ್ನಡದಲ್ಲಿ ಆಗಿರುವ, ಆಗುತ್ತಿರುವ ಅನಾಹುತ ಒಂದೆರಡಲ್ಲ. ಐಆರ್‌ಬಿಗೆ ಕಡಿವಾಣ ಹಾಕಿ ಜನರಿಗಾಗುತ್ತಿರುವ ತೊಂದರೆ ತಪ್ಪಿಸುವ ಕರ್ತವ್ಯ ನಿಭಾಯಿಸಬೇಕಾದ ಎನ್‌ಎಚ್‌ಎ(ನ್ಯಾಷನಲ್ ಹೈವೇ ಅಥಾರಿಟಿ) ಅಡ್ನಾಡಿ-ಅಕ್ರಮ ಕೆಲಸಕ್ಕೆ ಸಹಕರಿಸುತ್ತಿದೆ. ಮೊದಲಿಗೆ ಹೈವೇ ವಿನ್ಯಾಸವೇ ಎಡವಟ್ಟಿನದಾಗಿದೆ. ಜಿಲ್ಲಾಡಳಿತ, ಸ್ಥಳೀಯ ಮಂತ್ರಿ-ಶಾಸಕ-ಸಂಸದರ ಸೂಚನೆ-ನಿರ್ದೇಶನವನವನ್ನೆಲ್ಲ ಧಿಕ್ಕರಿಸಿ ಏಕಪಕ್ಷೀಯವಾಗಿ ಐಆರ್‌ಬಿ ಯದ್ವಾತದ್ವಾ ಕಾಮಗಾರಿ ನಡೆಸಿದೆ-ನಡೆಸುತ್ತಿದೆ. ಇದರಿಂದ ರಸ್ತೆಯಲ್ಲಿ ಪ್ರಯಾಣಿಸುವವರು, ನಡೆದಾಡವವರಿಗಷ್ಟೇ ಅಲ್ಲ, ರಸ್ತೆಯ ಅಕ್ಕಪಕ್ಕದಲ್ಲಿರುವ ವಸತಿ, ವಾಣಿಜ್ಯ ಪ್ರದೇಶದ ಜನರಿಗಾಗುತ್ತಿರುವ ಹಿಂಸೆ ಹೇಳತೀರದು. ಕೆಲವಡೆಯಂತೂ ಸರಿಪಡಿಸಲಾಗದ ಅಧ್ವಾನಗಳಾಗಿ ಜನರು ಜನ್ಮಪೂರ್ತಿ ಸಮಸ್ಯೆ-ಸಂಕಷ್ಟ ಎದುರಿಸುವಂತಾಗಿದೆ.

ರಸ್ತೆಯ ಆಚೀಚೆಯ ಬೃಹತ್ ಗುಡ್ಡಗಳನ್ನು ಯಾವುದೇ ತಾಂತ್ರಿಕ-ವೈಜ್ಞಾನಿಕ ಯೋಚನೆ-ಯೋಜನೆ-ಎಚ್ಚರಿಕೆಗಳಿಲ್ಲದೆ ಮನಸೋ ಇಚ್ಛೆ ಕತ್ತರಿಸಲಾಗಿದೆ. ಹೆಚ್ಚು ಮಳೆ ಬೀಳುವ ಪ್ರದೇಶ ಉತ್ತರ ಕನ್ನಡ. ಈ ಮಳೆ ನೀರು ಸರಾಗವಾಗಿ ಹರಿದು ಹೋಗಲು ಅನುವಾಗುವಂತೆ ಗುಡ್ಡಗಳನ್ನು ಇಳಿಜಾರಾಗಿ ಕತ್ತರಿಸಬೇಕಿತ್ತು. ಆದರೆ ಐಆರ್‌ಬಿ-ಎನ್‌ಎಚ್‌ಎ ಬುದ್ಧಿವಂತರು ಗುಡ್ಡಗಳನ್ನು ಲಂಬವಾಗಿ() ತುಂಡರಿಸಿದ್ದಾರೆ. ಸಾಧಕ-ಬಾಧಕಗಳನ್ನು ಲೆಕ್ಕಿಸದೆ ಗುಡ್ಡದಲ್ಲಿನ ಬಂಡೆಗಳನ್ನು ಸಾರಾಸಗಟಾಗಿ ಸ್ಫೋಟಿಸಿ ಹೆದ್ದಾರಿ ನಿರ್ಮಾಣಕ್ಕೆ ಬೇಕಾದಷ್ಟು ಪ್ರದೇಶ ಸಮತಟ್ಟು ಮಾಡಿಕೊಂಡಿದ್ದಾರೆ. ಈ ವಿವೇಚನಾರಹಿತ ಕೆಲಸದಿಂದ ಗುಡ್ಡಗಳಲ್ಲಿ ಬಿರುಕುಗಳು ಮೂಡಿವೆ. ಹೆದ್ದಾರಿ ಅಕ್ಕ-ಪಕ್ಕದಲ್ಲಿ ಮಳೆ ನೀರು ಹರಿದು ಹೋಗಲು ಗಟಾರ ಸಹ ನಿರ್ಮಿಸಿಲ್ಲ. ಹೀಗಾಗಿ ಮಳೆಗಾಲದಲ್ಲಿ ಗುಡ್ಡದ ಬಿರುಕುಗಳಲ್ಲಿ ನೀರು ಇಳಿದು, ಗುಡ್ಡದ ಬುಡದಲ್ಲಿ ನೀರು ತುಂಬಿ ಗುಡ್ಡಗಳು ಕುಸಿಯುತ್ತಿವೆ. ಮಣ್ಣಿನ ಸಾಂದ್ರತೆ-ಭೌಗೋಳಿಕ ಸ್ಥಿತಿ-ಗತಿ ಪ್ರಜ್ಞಾಪೂರ್ವಕವಾಗೇ ಕಡೆಗಣಿಸಿ ಗುಡ್ಡಕ್ಕೆ ತಡೆಗೋಡೆ ಕಟ್ಟಲಾಗಿದೆ. ಈ ತಡಗೋಡೆಗಳು ಮಣ್ಣಿನ ಒತ್ತಡಕ್ಕೆ ಗುಡ್ಡಗಳ ಸಮೇತ ಹೆದ್ದಾರಿಗೆ ಬೀಳುತ್ತಿವೆ. ಅಂಕೋಲಾ ತಾಲೂಕಿನ ಶಿರೂರು ಮತ್ತು ಕುಮಟಾ ತಾಲೂಕಿನ ಬೆಟಕುಳಿಯಲ್ಲಿ ಗುಡ್ಡಗಳು ಜನ ವಸತಿ ಪ್ರದೇಶಗಳ ಮೇಲೆ ಉರುಳಿ ಹತ್ತಾರು ಮಂದಿ ಐಆರ್‌ಬಿ-ಎನ್‌ಎಚ್‌ಎಗೆ ಆಹುತಿಯಾಗಿದ್ದಾರೆ!

ಪಶ್ಚಿಮಕ್ಕೆ ನೀರು ಹರಿದು ಹೋಗುವ ವ್ಯವಸ್ಥೆ ಕಾಮಗಾರಿ ಕಂಪನಿ ಮಾಡಿಲ್ಲ. ಇದನ್ನು ಎನ್‌ಎಚ್‌ಎ ಅಧಿಕಾರಿಗಳು ಕಂಡೂಕಾಣದಂತಿದ್ದಾರೆ. ಮಳೆಗಾಲದಲ್ಲಿ ರಭಸದಿಂದ ಉಕ್ಕಿ ಹರಿಯುವ ನೀರು ಸಮುದ್ರದೆಡೆ ಸಾಗಲು ದಾರಿಯಿಲ್ಲದೆ ಜನ ವಸತಿ, ತೋಟ, ಗದ್ದೆಗಳಿಗೆ ನುಗ್ಗುತ್ತಿದೆ. ನಿಷ್ಪಾಪಿ ಜನರ ಬದುಕು ಧ್ವಂಸವಾಗುತ್ತಿದೆ.

ಕುಮಟಾ, ಹೊನ್ನಾವರ ಮತ್ತು ಭಟ್ಕಳ ಶಹರಗಳಲ್ಲಿ ಅತೀ ಅವಶ್ಯವಾದ ಮೇಲ್ಸೇತುವೆ, ಸರ್ವಿಸ್ ರಸ್ತೆ ನಿರ್ಮಿಸಿಲ್ಲ. ಹೈವೇ ಗುಂಟವಿರುವ ಕೆಲವು ಜನನಿಬಿಡ ಹಳ್ಳಿಗಳಲ್ಲೂ ಸರ್ವಿಸ್ ರಸ್ತೆ, ಪಾದಚಾರಿ ಮಾರ್ಗ() ಇಲ್ಲ. ಹೀಗಾಗಿ ಜನರು ಜೀವ ಕೈಲಿಡಿದು ಓಡಾಡುವಂತಾಗಿದೆ. ನಿತ್ಯ ಒಂದಲ್ಲ ಒಂದು ಅಪಘಾತ ಆಗುತ್ತಿದೆ. ಪ್ರಾಣ ಹಾನಿ, ಅಂಗಾಂಗ ಊನಗಳಾಗುತ್ತಿದೆ. ಮೂರೂ ತಾಲೂಕಾ ಕೇಂದ್ರಗಳು ಪಶ್ಚಿಮಕ್ಕಿವೆ. ಪೂರ್ವದಲ್ಲಿ ನೂರಾರು ಹಳ್ಳಿಗಳಿವೆ. ಸರ್ವಿಸ್ ರಸ್ತೆ ಇಲ್ಲದಿರುವುದರಿಂದ ಹಳ್ಳಿಗರು ತಾಲೂಕಾ ಕೇಂದ್ರ-ನಗರ ಪ್ರವೇಶಿಸಲು ತಿಣುಕಾಡಬೇಕಾಗಿದೆ.

ಐಆರ್‌ಬಿ ಭೂಪರು 2014ರಲ್ಲಿ ಉತ್ತರ ಕನ್ನಡದಲ್ಲಿ ಚತುಷ್ಪತ ಕಾಮಗಾರಿ ಶುರುಮಾಡುವಾಗ ಮೂರೇ ವರ್ಷದಲ್ಲಿ ಮುಗಿಸುವ ಮಾತುಗಳನ್ನಾಡಿದ್ದರು. ಆದರೆ ಇವತ್ತಿಗೂ ಪೂರ್ಣ ಪ್ರಮಾಣದ ಹೈವೇ ಸಿದ್ಧವಾಗಿಲ್ಲ. ಅರ್ಧಂಬರ್ಧ ಕಾಮಗಾರಿಯಿಂದ ಪ್ರಯಾಣ ಪ್ರಯಾಸವಾಗಿದೆ. ಗಮ್ಯ ತಲುಪುವವರೆಗೂ ಆತಂಕ-ಕಷ್ಟ ತಪ್ಪಿದ್ದಲ್ಲ. ಕಾಮಗಾರಿ ಕಾಲಮಿತಿಯಲ್ಲಿ ಮುಗಿಸಲು ವಿಫಲವಾಗಿರುವ ಅಸಮರ್ಥ ಐಆರ್‌ಬಿ ಅವ್ಯವಸ್ಥೆಯ ಹೈವೇಗೆ ಟೋಲ್ ಮಾತ್ರ ಬಲವಂತದಿಂದಲೇ ವಸೂಲಿಗಿಳಿದಿದೆ. ಉತ್ತರ ಕನ್ನಡದಲ್ಲಿ ಎರಡು ಸುಂಕದ ಕಟ್ಟೆಗಳನ್ನು ಕಟ್ಟಿರುವ ಐಆರ್‌ಬಿ ಅಲ್ಲಿ ಬೌನ್ಸರ್‌ಗಳನಿಟ್ಟುಕೊಂಡು ನಿಭಾಯಿಸುತ್ತಿದೆ.

ಎನ್‌ಎಚ್-3, ಎನ್‌ಎಚ್-4, ಎನ್‌ಎಚ್-8 ಮೊದಲಾದ ಹೈವೇಗಳಿಗೆ ಹೋಲಿಸಿದರೆ ಈ ಅರೆಬರೆ ಕಾಮಗಾರಿಯ ಎನ್‌ಎಚ್-66ರ ಸರಾಸರಿ ವೇಗವೂ ತೀರಾ ಕಡಿಮೆ. ಇದಕ್ಕೆ ನ್ಯೂನತೆಗಳ ರಸ್ತೆ ವಿನ್ಯಾಸ-ಕಳಪೆ ಕಾಮಗಾರಿ ಒಂದು ಕಾರಣವಾದರೆ, ರಸ್ತೆಯ ಆಚೀಚೆ ಮನೆ, ವ್ಯಾಪಾರ-ವಹಿವಾಟು ಕೇಂದ್ರಗಳೇ ಮುಂತಾದ ಮಾನವ ವಸಾಹತುಗಳಿಂದ ಕಿರಿದಾಗಿರುವ ಹೈವೇ ಅಗಲ ಮತ್ತೊಂದು ಕಾರಣ. ಬಹುತೇಕ ಕಡೆಗಳಲ್ಲಿ 65 ಮೀಟರ್ ಅಗಲದ ಹೈವೇ ನಿರ್ಮಾಣಕ್ಕೆ ಬೇಕಾಗುವಷ್ಟು ಭೂಮಿಯನ್ನು ಎನ್‌ಎಚ್‌ಎ ಸ್ವಾಧೀನ ಪಡಿಸಿಕೊಂಡಿದೆ. ಆದರೆ ವರ್ತಕ ಲಾಬಿಯ ಹಿತಾಸಕ್ತಿ ಕಾಪಾಡಲು ಕೇಂದ್ರ ಮತ್ತು ರಾಜ್ಯ ಸರಕಾರದ ಆಯಕಟ್ಟಿನ ಅಧಿಕಾರದಲ್ಲಿರುವ ರಾಜಕಾರಣಿಗಳೆಲ್ಲ ಒಂದಾಗಿ ಕುಮಟಾ, ಹೊನ್ನಾವರ, ಭಟ್ಕಳ ಮತ್ತು ಹಳದೀಪುರ, ಶಿರಾಲಿ ಮುಂತಾದ ದೊಡ್ಡ ಹಳ್ಳಿಗಳಲ್ಲಿ ಹೈವೇ ಅಗಲ ಏಕಪಕ್ಷೀಯವಾಗಿ 45 ಮೀಟರಿಗೆ ಸೀಮಿತಗೊಳ್ಳುವಂತೆ ನೋಡಿಕೊಳ್ಳಲಾಗಿದೆ.

ಅನಂತಕುಮಾರ್ ಹೆಗಡೆ, ಕಾಗೇರಿ ಮತ್ತು ದೇಶಪಾಂಡೆ

ಕುಮಟಾ, ಹೊನ್ನಾವರ ಮತ್ತು ಭಟ್ಕಳದಲ್ಲಿ ಪೇಟೆಯನ್ನೇ ಸೀಳಿಕೊಂಡು ಹೆದ್ದಾರಿ ನಡುಮಧ್ಯದಲ್ಲೇ ಹಾದುಹೋಗಿದೆ. ಮೂರೂ ನಗರದಲ್ಲಿ ಹೆದ್ದಾರಿಯ ಮೂಲ ನೀಲ ನಕ್ಷೆಯಂತೆ 65 ಮೀ. ಅಗಲದ ರಸ್ತೆ ತಯಾರಾಗಬೇಕಿತ್ತು; ಮೇಲ್ಸೇತುವೆ-ಪಾದಚಾರಿ ಮಾರ್ಗಗಳು ಇರಬೇಕಿತ್ತು. 65 ಮೀ. ರಸ್ತೆಯಾದರೆ ಅಂಗಡಿ ಮುಂಗಟ್ಟುಗಳನ್ನು ತೆರವುಗೊಳಿಸಬೇಕಾಗುತ್ತದೆ; ಮೇಲ್ಸೇತುವೆ(ಅಂಡರ್‌ಪಾಸ್) ಇದ್ದರೆ ಬಲಾಢ್ಯ ಉದ್ಯಮಿಗಳ ಹೊಟೇಲ್, ಲಾಡ್ಜ್, ಅಂಗಡಿಗಳಿಗೆ ಗಿರಾಕಿಗಳು ಬರದೆ ದುಡಿಮೆಗೆ ಖೋತಾ ಆಗುತ್ತದೆಂದು 24 ತಾಸೂ ಬಿಜಿಯಾಗಿರುವ ಹೈವೇಯ ಅಗಲವನ್ನೇ 45 ಮೀ.ಗೆ ಕಂಟಕಕಾರಿಯಾಗಿ ಕಿರಿದುಗೊಳಿಸಲಾಗಿದೆ. ರಸ್ತೆ ಅಗಲ ಕಡಿತವಾಗಿರುವುದರಿಂದ ಪಾದಚಾರಿ ಮಾರ್ಗ ಇಲ್ಲದಾಗಿದೆ. ಕರ್ಕಿ, ಹಳದೀಪುರ, ಶರಾಲಿ ಮತ್ತಿತರೆಡೆ 45 ಮೀ. ಅಗಲದ ರಸ್ತೆಯಲ್ಲೇ ಬಾರೀಕಾದ ಕಾಂಕ್ರೀಟ್ ಡಿವೈಡರ್ ಹಾಕಲಾಗಿದೆ. ಅಪಘಾತವಾಗುತ್ತದೆಂದು ಪೊಲೀಸ್ ಬ್ಯಾರಿಕೇಡ್‌ಗಳನ್ನು ಯೂ-ಟರ್ನ್‌ಗಳಲ್ಲಿ ಅಡ್ಡವಾಗಿಡಲಾಗಿದೆ. ಇದರಿಂದಾಗಿ ಯೂ-ಟರ್ನ್‌ಗಳು ಜವರಾಯನ ಹಾಟ್ ಸ್ಪಾಟ್‌ಗಳಂತಾಗಿವೆ. ಹೈವೇ ಕಾಮಗಾರಿ ಆರಂಭವಾದ ಬಳಿಕದ ಈ ಹತ್ತು ವರ್ಷದಲ್ಲಿ ಕುಮಟಾ, ಹೊನ್ನಾವರ-ಭಟ್ಕಳದಲ್ಲಿ 27 ಮಂದಿ ಬಲಿಯಾಗಿದ್ದಾರೆ. ಇದು ಪೊಲೀಸ್ ದಾಖಲೆಗಳೇ ಹೇಳುವ ಅಂಕಿ-ಅಂಶ.

ಹೈವೇ ನಿರ್ಮಾಣ ಕೇಂದ್ರ ಸರಕಾರದ ಯೋಜನೆ. ಹಾಗಾಗಿ ಮೂರು ತಾಲೂಕಿನ ಮಂದಿ ಹಲವು ಬಾರಿ ಸಂಸದ ಕಾಗೇರಿ ವಿಶ್ವೇಶ್ವರ ಹೆಗಡೆ ಕಂಡು, ಕಷ್ಟ ಹೇಳಿಕೊಂಡಿದ್ದಾರೆ. ಜೀವ ಹಾನಿ ತಪ್ಪಿಸಿ ಎಂದು ಮನವಿ ಮಾಡಿಕೊಂಡಿದ್ದಾರೆ. ಆರೆಸೆಸ್ ಕೃಪಾಕಟಾಕ್ಷವಿರುವ ಸ್ಥಳೀಯ ಕೊಂಕಣಿ ವರ್ತಕರ ವ್ಯಾಪಾರಕ್ಕೆ ಧಕ್ಕೆಯಾಗುತ್ತದೆಂದು ಭಾವಿಸಿದ ಕಾಗೇರಿಯವರು ಬಾಯಿ ಬಿಡದಂತಾಗಿದ್ದಾರೆ. ಕಾಂಗ್ರೆಸ್ಸಿನ ಹಿರಿಯ ರಾಜಕಾರಣಿ-ಹಾಲಿ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಹೈವೇಯನ್ನು 45 ಮೀ. ಕುಗ್ಗಿಸಿದ, ಅಂಡರ್‌ಪಾಸ್ ಆಗದಂತೆ ಆಟ ಆಡಿದ ಆರೆಸೆಸ್-ಬಿಜೆಪಿ ತಂಡದಲ್ಲಿದ್ದಾರೆ.

ದೇಶಪಾಂಡೆ ಅಧಿಕಾರದಲ್ಲಿದ್ದಾಗೆಲ್ಲ ತುಂಬ ಮುತುವರ್ಜಿಯಿಂದಲೇ ಸ್ವಜಾತಿ ಕೊಂಕಣಿ ವ್ಯಾಪಾರಿಗಳ ಅನುಕೂಲಕ್ಕೆ ಹೋರಾಡಿದ ನಿದರ್ಶನಗಳು ಸಾಕಷ್ಟಿವೆ. ಮೇಲ್ನೋಟಕ್ಕೆ ದೇಶಪಾಂಡೆ, ಮಾಜಿ ಸಂಸದ ಅನಂತಕುಮಾರ್ ಹೆಗಡೆ ಹಾಗೂ ಹಾಲಿ ಎಂಪಿ ಕಾಗೇರಿಯವರು ಹೈವೇ ಕಾಮಗಾರಿ ಹಳ್ಳ ಹಿಡಿದಿದೆ ಎಂದು ಕೂಗಾಡುತ್ತಾರೆ. ವಾಸ್ತವವಾಗಿ ಇಡೀ ಚತುಷ್ಪಥ ಯೋಜನೆ ನರಕದಂತಾಗಲು, ಇವರೇ ಕಾರಣ ಎಂದು ಜನ ಮಾತನಾಡಿಕೊಳ್ಳುತ್ತಿದ್ದಾರೆ.

ಎನ್‌ಎಚ್-66 ನಾಲ್ಕು ಪಥವಾಗಿಸುವ ಯೋಜನೆಯ ಅವಸ್ಥೆ ಅರ್ಥವಾಗಬೇಕೆಂದರೆ ಮೊದಲು ಉತ್ತರ ಕನ್ನಡದ ಕೊಂಕಣಿ ವ್ಯಾಪಾರಸ್ಥರ ಲಾಬಿಯ ಇತಿಹಾಸ ಅರಿಯಬೇಕು. ಜಿಲ್ಲೆಯ ವಾಣಿಜ್ಯ ವಹಿವಾಟು ಕೊಂಕಣಿಗರು ಎಂದು ಜನಜನಿತರಾಗಿರುವ ಗೌಡ ಸಾರಸ್ವತ ಬ್ರಾಹ್ಮಣ(ಜಿಎಸ್ಬಿ) ಸಮುದಾಯದ ಬಿಗಿ ಹಿಡಿತದಲ್ಲಿದೆ. ಬಹುತೇಕ ಕೊಂಕಣಿಗರು ಸಂಘ ಪರಿವಾರ-ಬಿಜೆಪಿಯ ಕಟ್ಟರ್ ಅನುಯಾಯಿಗಳು. ಹಳಿಯಾಳದ ಮಂಗೇಶ್ ಭೇಂಡೆ ಆರೆಸೆಸ್‌ನ ಉನ್ನತ ಸಮಿತಿಯ ಪ್ರಮುಖ ಮುಖಂಡ. ಭೇಂಡೆಯ ಪರಮಾಪ್ತ ಮಿತ್ರ ಕುಮಟಾದ ಹನುಮಂತ್ ಶಾನಭಾಗ್ ಉತ್ತರ ಕನ್ನಡದ ಕಲ್ಲಡ್ಕ ಎಂದೇ ಚಿರಪರಿಚಿತ. ಹನುಮಂತ್ ಶಾನುಭಾಗ್ ಜಿಲ್ಲೆಯ ಕೊಂಕಣಿ ವರ್ತಕ ಗಣದ ಟ್ರಬಲ್ ಶೂಟರ್. ಸ್ಥಳೀಯ ಹಿಂದುತ್ವದ ಚಿಂತನ ಚಿಲುಮೆಯ ನೀತಿ ನಿರೂಪಕ. ಪಂಚಾಯಿತಿಯಿಂದ ಪಾರ್ಲಿಮೆಂಟ್ ತನಕದ ಬಿಜೆಪಿ ಅಭ್ಯರ್ಥಿಗಳ ಆಯ್ಕೆಯಲ್ಲಿ ಶಾನಭಾಗರದೇ ಅಂತಿಮವಾಣಿ. ಜಿಲ್ಲೆಯ ಯಾವ ಬಿಜೆಪಿಯ ಶಾಸಕ-ಸಂಸದನೂ ಭೇಂಡೆಜೀ-ಶಾನಭಾಗಜೀಗಳು ಹಾಕಿದ ಗೆರೆ ದಾಟುವುದಿಲ್ಲ!

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR